# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –276 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:27–05–2025 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 276 | RNI No: KARKAN/2023/88462 | KA/SK/CTA-874/2024-2026 | Chitradurga | Date: 27-05-2025 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಮಕ್ಕಳ ಮನೋವಿಕಾಸಕ್ಕೆ ಬೇಸಿಗೆ ಶಿಬಿರ ಪೂರಕ: ಮಹಬೂಬ್ ಜೀಲಾನಿ ಖುರೇಷಿ 2
ಜನನ, ಮರಣ ನೋಂದಣಿ ವಿಳಂಬಕ್ಕೆ ಆಸ್ಪದವಿಲ್ಲ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ 3
ಪಾಠದ ಜೊತೆಗೆ ಆಟದ ಕಡೆಗೂ ಹೆಚ್ಚಿನ ಗಮನ ಕೊಡಿ: ಶಾಸಕ ಚಂದ್ರಪ್ಪ 4



ಸುದ್ದಿ, ಜಾಹಿರಾತಿಗೆ
9686622252


## ಫಾಸ್ಟ್ ನ್ಯೂಸ್

### ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

» ಚಿತ್ರದುರ್ಗ

2025–26ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಘಟಕಗಳಿಗೆ ಸಹಾಯಧನ ಪಡೆಯಲು ಆಸಕ್ತ ರೈತ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 20 ಅರ್ಜಿ ಸಲ್ಲಿಸಲು ಕೊನೆಯ ದಿನ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ಕಾರ್ಯಕ್ರಮಡಿ ದಾಳಿಂಬೆ, ಕಂದು ಬಾಳೆ/ಅಂಗಾಂಶ ಬಾಳೆ, ಪಪ್ಪಾಯ, ಡ್ರಾಗನ್ ಫ್ರೂಟ್ ಹಣ್ಣಿನ ಬೆಳೆಗಳು, ಹೈಬ್ರೆಡ್ ತರಕಾರಿ, ಕಟ್ ಫ್ಲವರ್ಸ್ (ಗುಲಾಬಿ, ಜೆರ್ಬೆರಾ, ಕಾರ್ನೇಷನ್) ಸುಗಂಧರಾಜ ಹೂವುಗಳು, ಬಿಡಿ ಹೂವುಗಳ ಮತ್ತು ಕರಿಮೆಣಸು/ಬಹುವಾರ್ಷಿಕ ಸಾಂಬಾರು ಬೆಳೆಗಳ ಪ್ರದೇಶ ವಿಸ್ತರಣೆ ಕಾರ್ಯಕ್ರಮಕ್ಕೆ ಮತ್ತು ಅಣಬೆ ಉತ್ಪಾದನಾ ಘಟಕ, ಪುನಶ್ಚೇತನ ಕಾರ್ಯಕ್ರಮ, ಪಾಲಿಥೀನ್ ನರ್ಸರಿ ಘಟಕ, ಪಕ್ಷಿ ನಿರೋದಕ ಬಲೆ, ವೈಯಕ್ತಿಕ ನೀರು ಸಂಗ್ರಹಣಾ ಘಟಕ, ಪಾಲಿಹೌಸ್, ಪ್ಲಾಸ್ಟಿಕ್ ಮಲ್ಚಿಂಗ್, ಕಳೆ ನಿಯಂತ್ರಕ ಮ್ಯಾಟ್ (ವೀಡ್ ಮ್ಯಾಟ್), ತರಕಾರಿ ಬೆಳೆಗಳಿಗೆ ಆಧಾರ ನೀಡುವ ವ್ಯವಸ್ಥೆ, ಎರೆಹುಳು ಗೊಬ್ಬರ ಘಟಕ, ಜೇನು ಪೆಟ್ಟಿಗೆ, 20 ಹೆಚ್.ಪಿ ವರೆಗಿನ ಟ್ರ್ಯಾಕ್ಟರ್, ಪವರ್ ಟ್ರಿಲ್ಲರ್, ಭೂಮರ್ ಸ್ಪ್ರೆಯರ್, ಶೀಥಲಗೃಹ ಘಟಕ, ಪ್ರಾಥಮಿಕ ಸಂಸ್ಕರಣಾ ಘಟಕ, ಸೋಲಾರ್ ಕ್ರಾಪ್ ಡ್ರೈಯರ್, ಪ್ಯಾಕ್‌ಹೌಸ್ ಹಾಗೂ ಈರುಳ್ಳಿ ಶೇಖರಣ ಘಟಕಗಳಿಗೆ ಸಹಾಯಧನ ಪಡೆಯಲು ಆಸಕ್ತ ರೈತ ಫಲಾನುಭವಿಗಳಿಂದ ಅರ್ಜಿ ಅಹ್ವಾನಿಸಲಾಗಿರುತ್ತದೆ. ಅರ್ಜಿಯನ್ನು ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಗೆ 2025ರ ಜೂನ್ 20 ರೊಳಗೆ ನಿಯಮಾನುಸಾರ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ರೈತರು ಆಯಾ ತಾಲ್ಲೂಕಿನ ಸಂಬಂಧಪಟ್ಟ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿ, ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಜಿಲ್ಲೆಯಲ್ಲಿ 1.7 ಮಿ.ಮೀ ಮಳೆ

» ಚಿತ್ರದುರ್ಗ

ಭಾನುವಾರ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 3.4 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 0.8 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 1.6 ಹಿರಿಯೂರು ತಾಲ್ಲೂಕು 1.2 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 2 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 3.5 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 1.9 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 0.8 ಮಿ.ಮೀ, ನಾಯಕನಹಟ್ಟಿ 1.3, ಪರಶುರಾಂಪುರ 0.9 ಮಿ.ಮೀ, ತಳಕು 0.2 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 1.1 ಮಿ.ಮೀ, ಭರಮಸಾಗರ 1.9 ಮಿ.ಮೀ, ಹಿರೇಗುಂಟನೂರು 1.6 ಮಿ.ಮೀ, ತುರುವನೂರು 2.2 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 0.7 ಮಿ.ಮೀ, ಐಮಂಗಲ 0.9, ಧರ್ಮಪುರ 0.5 ಮಿ.ಮೀ. ಜವನಗೊಂಡನಹಳ್ಳಿ 2.7 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 2.4 ಮಿ.ಮೀ, ಬಿ.ದುರ್ಗ 1.2 ಮಿ.ಮೀ, ರಾಮಗಿರಿ 2.3 ಮಿ.ಮೀ, ತಾಳ್ಯ 1.9 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 4.8 ಮಿ.ಮೀ, ಮಾಡದಕೆರೆ 2.1 ಮಿ.ಮೀ, ಮತ್ತೋಡು 3.4 ಮಿ.ಮೀ, ಶ್ರೀರಾಂಪುರ 3.6 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮುರು 1 ಮಿ.ಮೀ, ದೇವಸಮುದ್ರದಲ್ಲಿ 3 ಮಿ.ಮೀ ಮಳೆಯಾಗಿದೆ.

### ಮೇ 27 ರಂದು ಸಾಹಿತಿ ಬಿ.ಎಲ್.ವೇಣು ಸಂದರ್ಶನ

» ಚಿತ್ರದುರ್ಗ

ಕಥೆ,ಕಾದಂಬರಿಕಾರ, ಹಾಗೂ ಚಿತ್ರ ಸಾಹಿತಿ ಡಾ.ಬಿ.ಎಲ್.ವೇಣು ಜನ್ಮ ದಿನ ಹಾಗೂ ಚಿತ್ರದುರ್ಗ ಆಕಾಶವಾಣಿ 34ನೇ ವಾರ್ಷಿಕೋತ್ಸ ನಿಮಿತ್ತ ಜಿಲ್ಲೆಯ ಸಾಹಿತ್ಯ ಮತ್ತು ಸಂಸ್ಕೃತಿ ಕುರಿತು ಆಕಾಶವಾಣಿ ಪ್ರಸಾರ ಕಾರ್ಯ ನಿರ್ವಹಣಾಧಿಕಾರಿ ಶಿವಪ್ರಕಾಶ್.ಡಿ.ಆರ್ ಹಾಗೂ ದ್ಯಾಮಲಾಂಬಿಕ. ಎಂ.ಎಸ್ ನಡೆಸಿದ ವಿಶೇಷ ಸಂದರ್ಶನದ ಧ್ವನಿ ಮುದ್ರಣ ಮೇ 27 ರಂದು ಮಂಗಳವಾರ ಸಂಜೆ 7:45 ರಿಂದ 8:45 ರ ವರೆಗೆ ಸಂದರ್ಶನ ಪ್ರಸಾರವಾಗಲಿದೆ.

# ಬೇಡಿಕೆ ಈಡೇರಿಕೆಗಾಗಿ ಪ್ರತಿಭಟನೆ

» ಚಿತ್ರದುರ್ಗ

ಪೌರ ನೌಕರರನ್ನು ಸರ್ಕಾರಿ ನೌಕರರೆಂದು ಘೋಷಿಸಬೇಕು. ಹೊರಗುತ್ತಿಗೆ ಮೇಲೆ ಕಾರ್ಯನಿರ್ವಹಿಸುತ್ತಿರುವ ವಾಹನ ಚಾಲಕರು, ನೀರು ಸರಬರಾಜು ಸಿಬ್ಬಂದಿಗಳು, ಲೋಡರ್ಸ್, ಗುತ್ತಿಗೆ ಲೆಕ್ಕಿಗರು, ಕ್ಲೀನರ್ ಪೌರಕಾರ್ಮಿಕರು, ಸೂಪರ್ ವೈಸರ್ಸ್, ಕಂಪ್ಯೂಟರ್ ಆಪರೇಟರ್‌ಗಳು, ಜ್ಯೂನಿಯರ್ ಪ್ರೋಗ್ರಾಸ್ ಸಿಬ್ಬಂದಿಗಳನ್ನು ಖಾಯಂ ಮಾಡಬೇಕು ಎಂದು ಆಗ್ರಹಿಸಿ ಜಿಲ್ಲಾ ಪೌರಕಾರ್ಮಿಕರ ಸಂಘದ ವತಿಯಿಂದ ನೌಕರರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ರಾಜ್ಯದಲ್ಲಿರುವ ಎಲ್ಲಾ ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸಾಕಷ್ಟು ಸಂಕಷ್ಟಗಳನ್ನು ಅನುಭವಿಸುತ್ತಿದ್ದಾರೆ. ಆದರೂ ಕೂಡ ಸರ್ಕಾರ ನಮ್ಮಗಳತ್ತ ಗಮನಹರಿಸದೆ ನಿರ್ಲಕ್ಷ್ಯ ತೋರುತ್ತಿದೆ.ಪೌರ ನೌಕರರನ್ನು ಸರ್ಕಾರಿ ನೌಕರರೆಂದು ಘೋಷಿಸಬೇಕು ಹಾಗೂ ಕೆ.ಜಿ.ಐ.ಡಿ., ಜಿ.ಪಿ.ಎಫ್., ಜ್ಯೋತಿ ಸಂಜೀವಿನಿ, ಸೇರಿದಂತೆ ಸರ್ಕಾರಿ ನೌಕರರಿಗೆ ಸಿಗುವ ಸೌಲಭ್ಯವನ್ನು ಪೌರ



ನೌಕರರಿಗೂಜಾರಿಮಾಡಬೇಕು.ಸುಮಾರು 25–30 ವರ್ಷಗಳಿಂದ ಹೊರಗುತ್ತಿಗೆ ಮೇಲೆ ಕಾರ್ಯನಿರ್ವಹಿಸುತ್ತಿರುವ ವಾಹನ ಚಾಲಕರು, ನೀರು ಸರಬರಾಜು ಸಿಬ್ಬಂದಿಗಳು,ಲೋಡರ್ಸ್,ಗುತ್ತಿಗೆಲೆಕ್ಕಿಗರು, ಕ್ಲೀನರ್ ಪೌರಕಾರ್ಮಿಕರು, ಸೂಪರ್ ವೈಸರ್ಸ್, ಕಂಪ್ಯೂಟರ್ ಆಪರೇಟರ್‌ಗಳು, ಜ್ಯೂನಿಯರ್ ಪ್ರೋಗ್ರಾಸ್ ಸಿಬ್ಬಂದಿಗಳನ್ನು ಖಾಯಂ ಮಾಡಬೇಕು. 2022–23ನೇ ಸಾಲಿನಲ್ಲಿ ಪೌರಕಾರ್ಮಿಕರ ವಿಶೇಷ ನೇಮಕಾತಿಯಡಿ ಪೌರಕಾರ್ಮಿಕರು ನೇಮಕಾತಿ ಹೊಂದಿದ್ದು, ನೌಕರರಿಗೆ ಸರ್ಕಾರವು ನಗರ ಸ್ಥಳೀಯ ಸಂಸ್ಥೆಯ ಸ್ಥಳೀಯ ನಿಧಿಯಿಂದ ವೇತನ ಪಡೆಯಲು ಆದೇಶಿಸಲಾಗಿದ್ದನ್ನು ರದ್ದುಪಡಿಸಿ, ಎಸ್.ಎಫ್.ಸಿ ಅನುದಾನದಡಿ ವೇತನವನ್ನು ನೀಡಬೇಕು ಎಂದು ಒತ್ತಾಯಿಸಿ ಪೌರಕಾರ್ಮಿಕರು ತೋಳಿಗೆ ಕಪ್ಪು ಬಟ್ಟೆ ಧರಿಸಿ ಪ್ರತಿಭಟನೆ ನಡೆಸಿದರು.ಚಿತ್ರದುರ್ಗ ನಗರಸಭೆಯಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನೆಯನ್ನು ನಡೆಸಿದ ಪೌರ ಕಾರ್ಮಿಕರು ದಾರಿಯುದ್ದಕ್ಕೂ ಬೇಡಿಕೆ ಈಡೇರಿಕೆಗಾಗಿ ಘೋಷಣೆಗಳನ್ನು ಕೂಗಲಾಯಿತು. ತಮ್ಮ ಬೇಡಿಕೆ ಈಡೇರಿಕೆಗಾಗಿ ಕಳೆದ ಒಂದು ತಿಂಗಳಿಂದ ಕಚೇರಿಯಲ್ಲಿ ಕಪ್ಪು ಪಟ್ಟಿಯನ್ನು ಧರಿಸಿ ಕೆಲಸವನ್ನು ಮಾಡುವುದರ ಮೂಲಕ ಸರ್ಕಾರವನ್ನು ಒತ್ತಾಯಿಸಿದ್ದರು. ಇದಾದ ನಂತರ ಜಿಲ್ಲಾ ರಕ್ಷಣಾಧಿಕಾರಿಗಳು, ನಗರಸಭೆಯ ಅಧ್ಯಕ್ಷರು, ಪೌರಾಯುಕ್ತರಿಗೆ ಮನವಿ ಸಲ್ಲಿಸಿ ನಮ್ಮ ಬೇಡಿಕೆ ಈಡೇರಿಕೆಗೆ ಒತ್ತಾಯಿಸಲಾಯಿತು.

ಪ್ರತಿಭಟನೆಯಲ್ಲಿ ಪೌರಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಡಿ.ದುರುಗೇಶ, ಸಿ.ರೇಣುಕಾ, ರಾಜಣ್ಣ, ಎಸ್.ಪಿ.ಲವ ಸೇರಿದಂತೆ ಸುಮಾರು 300 ಕ್ಕೂ ಹೆಚ್ಚು ಪೌರಕಾರ್ಮಿಕರು ಭಾಗವಹಿಸಿದ್ದರು.

# ಬೆಳೆ ವಿಮೆ ಪರಿಹಾರ ಬಿಡುಗಡೆಗೊಳಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘದಿಂದ ಪ್ರತಿಭಟನೆ

» ಚಿತ್ರದುರ್ಗ

ರೈತರ ಸಭೆ ಕರೆದು ಕೂಡಲೆ ಬೆಳೆ ವಿಮೆ, ಬೆಳೆ ಪರಿಹಾರ ಬಿಡುಗಡೆಗೊಳಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ರೈತರು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ತುರ್ತಾಗಿ ಸಭೆ ಕರೆದು ಸಂಕಷ್ಟದಲ್ಲಿರುವ ರೈತರಿಗೆ ಬೆಳೆವಿಮೆ, ಬೆಳೆ ಪರಿಹಾರ ಕೊಡಬೇಕು. ಕೃಷಿ ಇಲಾಖೆ ಜಂಟಿ ನಿರ್ದೇಶಕರು ಈ ಹಿಂದೆ ಎರಡು ಬಾರಿ ರೈತರ ಸಭೆಗೆ ದಿನಾಂಕ ನಿಗಧಿಪಡಿಸಿ ರದ್ದುಪಡಿಸಿದ್ದಾರೆ. ಸಾಲದ ಸುಳಿಗೆ ಸಿಲುಕಿರುವ ರೈತರು ಅನೇಕ ಜ್ವಲಂತ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಸಾಲಗಾರರ ಕಾಟಕ್ಕೆ ಆತ್ಮಹತ್ಯೆಯ ದಾರಿ ಹಿಡಿದಿದ್ದಾರೆ. ಅದಕ್ಕಾಗಿ ಮೇ.31 ರೊಳಗಾಗಿ ಸಂಬಂಧಪಟ್ಟ ಇಲಾಖೆಯವರ ಸಭೆ ಕರೆದು ಪರಿಹಾರ ಬಿಡುಗಡೆಗೊಳಿಸಬೇಕೆಂದು ಪ್ರತಿಭಟನಾನಿರತ ರೈತರು ಒತ್ತಾಯಿಸಿದರು.

2024 ರಲ್ಲಿ ಈರುಳ್ಳಿ ಬೆಳೆ ನಷ್ಟವಾಗಿದ್ದು, ರೈತರು



ಕೈಸುಟ್ಟುಕೊಂಡಿದ್ದಾರೆ. ಕೃಷಿ ಇಲಾಖೆಯಿಂದ ತೊಗರಿ ಬೀಜ ಖರೀಧಿ ಮಾಡಿ ಬಿತ್ತನೆ ಮಾಡಿದ್ದು, ಹೂವು ಕೂಡ ಬಿಟ್ಟಿಲ್ಲ. ಇಂತಹ ಸಂಕಷ್ಟದಲ್ಲಿದ್ದರೂ ರೈತರಿಗೆ ಪರಿಹಾರ ಸಿಕ್ಕಿಲ್ಲ. ಚಳ್ಳಕೆರೆ ತಾಲ್ಲೂಕಿಗೆ ಬೆಳೆ ವಿಮೆ ಸಂಪೂರ್ಣವಾಗಿ ಬಂದಿಲ್ಲ. ದೇವರಹಳ್ಳಿಯ ರೈತರ ಜಮೀನಿನಲ್ಲಿ

ಕೆ.ಪಿ.ಟಿ.ಸಿ.ಎಲ್. ದೊಡ್ಡ ದೊಡ್ಡ ವಿದ್ಯುತ್ ಕಂಬಗಳನ್ನು ಅಳವಡಿಸಿದೆ. ನಾಲ್ಕು ವರ್ಷಗಳಾದರೂ ಇನ್ನು ಪರಿಹಾರ ಕೈಗೆ ಸಿಕ್ಕಿಲ್ಲ. ಇಷ್ಟೆಲ್ಲಾ ಗಂಭೀರ ಸಮಸ್ಯೆಗಳಿರುವುದರಿಂದ ಯಾವುದೇ ಕಾರಣಕ್ಕು ತಡಮಾಡದೆ ರೈತರ ಸಭೆ ಕರೆದು ಸೂಕ್ತ ಪರಿಹಾರ ನೀಡಬೇಕು. ಇಲ್ಲವಾದಲ್ಲಿ ಜಿಲ್ಲಾ ಪಂಚಾಯಿತಿ ಕೆಡಿಪಿ. ಸಭೆಯಂದು ಜಿಲ್ಲಾ ಉಸುವಾರಿ ಸಚಿವರಿಗೆ ಘೇರಾವ್ ಹಾಕಲಾಗುವುದೆಂದು ಕರ್ನಾಟಕ ರಾಜ್ಯ ರೈತ ಸಂಘದ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಎಚ್ಚರಿಸಿದರು.ಓ.ಟಿ.ತಿಪ್ಪೇಸ್ವಾಮಿ, ಕೆ.ಸಿ.ಹೊರಕೇರಪ್ಪ, ಜಿಲ್ಲಾಧ್ಯಕ್ಷ ಧನಂಜಯ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಎಸ್.ಮಂಜುನಾಥ್, ಜಿ.ಬಿ.ಪಾಪಣ್ಣ, ಬಸ್ತಿಹಳ್ಳಿ ಜಿ.ಸುರೇಶ್‌ಬಾಬು,

ಎಸ್.ಸಿದ್ದಪ್ಪ, ಆರ್.ಚೇತನ, ಬಿ.ತಿಪ್ಪೇಸ್ವಾಮಿ, ವಿ.ಕಲ್ಪನಾ, ಸುಧಾ ಡಿ.ಎಸ್.ಹಳ್ಳಿ, ಲಕ್ಷ್ಮಕ್ಕ ಆರ್, ಟಿ.ಮುನಿಸ್ವಾಮಿ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಸಿಇಟಿಯಲ್ಲಿ 6ನೇರ್‍ಯಾಂಕ್: ಸನ್ಮಾನ



ಚಿತ್ರದುರ್ಗ: ಪಿ.ಯು.ಸಿಯಲ್ಲಿ ಮತ್ತು ಸಿಇಟಿಯಲ್ಲಿ 6ನೇರ್‍ಯಾಂಕ್ ಪಡೆದಿರುವ ಮದಕರಿಪುರ ಗ್ರಾಮದ ಬಡ ಕುಟುಂಬದಲ್ಲಿರುವ ಎಮ್.ಮಾರುತಿಯವರಿಗೆ ಮದಕರಿ ಬಳಗದವತಿಯಿಂದ ಸೋಮವಾರ ಅವರ ನಿವಾಸದಲ್ಲಿ ಸನ್ಮಾನ ಮಾಡಲಾಯಿತು. ಮದಕರಿ ಬಳಗದ ಸಂಚಾಲಕರಾದ ಡಿ.ಗೋಪಾಲಸ್ವಾಮಿ ನಾಯಕ ಸನ್ಮಾನ ಮಾಡಿ ಮಾತನಾಡಿ ಪ್ರತಿಭೆ ಯಾರ ಸ್ವತ್ತು ಅಲ್ಲಾ ವಿದ್ಯೆಯನ್ನು ಪ್ರೀತಿಸುವವರಿಗೆ ವಿದ್ಯೆ ಒಲಿಯುತ್ತದೆ.ಇಲ್ಲಿ ಬಡತನ, ಸಿರಿತನ ಗಂಡು, ಹೆಣ್ಣು ಜಾತಿ, ಮತ, ಧರ್ಮವನ್ನು ಮೀರಿ ಯಾವುದೇ ಭೇಧಭಾವವಿಲ್ಲದೆ ಪರಿಶ್ರಮ ಮಾಡಿದವರಿಗೆ ವಿದ್ಯೆ ಒಲಿಯುತ್ತದೆ. ವಿದ್ಯೆಯನ್ನು ಪ್ರೀತಿಸಿದರೆ ವಿದ್ಯೆ ಒಲಿಯುತ್ತದೆ. ಮಾರುತಿಯವರು ವಿದ್ಯಾಭ್ಯಾಸ ಮುಂದುವರೆಯಲೆಂದು ಶುಭ ಹಾರೈಸಿದರು.ರ್‍ಯಾಂಕ್ ಪಡೆದ ವಿದ್ಯಾರ್ಥಿ ಮಾತನಾಡಿ ಶಿಕ್ಷಣವನ್ನು ಇದೆ ರೀತಿ ಮುಂದೆವರಿಸುತ್ತನೆ. ನಿಮ್ಮಗಳ ಸಹಾಯ ಮತ್ತು ಸಹಕಾರ ಅಗತ್ಯವಾಗಿದೆ, ಇಂದಿನ ದಿನಮಾನದಲ್ಲಿ ವಿದ್ಯೆ ಇದ್ದರೆ ಮಾತ್ರ ಶಕ್ತಿ ಬರುತ್ತದೆ. ಯಾವುದೇ ಕಾರಣಕ್ಕೂ ಸಹಾ ಕಲಿಯುವುದನ್ನು ಬಿಡುವುದಿಲ್ಲ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಮದಕರಿನಾಯಕ ವಂಶಸ್ಥರಾದ ರಾಜಮದಕರಿ ನಾಯಕ, ಜಿ.ಪ್ರಹ್ಲಾದ್, ಕೆ.ಸೋಮಶೇಖರ್,ನಾಗರಾಜು,ಪರಮೇಶ್ವರಪ್ಪ.ಆರ್,ಸುಪುತ್ರ,ಆರ್.ನಾರಾಯಣಸ್ವಾಮಿ, ಎಂ.ವೆಂಕಟಗಿರಿ, ಎಂ.ಕೆ.ರಾಜು, ತಿಪ್ಪೇಸ್ವಾಮಿ, ಮೂರ್ತಪ್ಪ, ಮಾರುತಿ ತಂದೆಯಾದ ಮೋಹನ್ ಇತರರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

### ವಿಶೇಷ ಲಸಿಕಾ ಅಭಿಯಾನದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ

# ಮಕ್ಕಳಿಗೆ ಲಸಿಕೆ ಕೊಡಿಸಿ, ಮಾರಕ ರೋಗಗಳಿಂದ ರಕ್ಷಿಸಿ

» ಚಿತ್ರದುರ್ಗ

ನಿಮ್ಮ ಮಕ್ಕಳಿಗೆ ಕಾಲ ಕಾಲಕ್ಕೆ ಸರಿಯಾಗಿ ಲಸಿಕೆ ಕೊಡಿಸಿ, ಮಾರಕ ರೋಗಗಳು ಬಾರದಂತೆ ರಕ್ಷಿಸಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಹೇಳಿದರು.

ಇಲ್ಲಿನ ಗಾಂಧಿ ನಗರದ ಅಂಗನವಾಡಿ ಕೇಂದ್ರದಲ್ಲಿ ಸೋಮವಾರ ಲಸಿಕಾ ವಂಚಿತ ಮಕ್ಕಳಿಗೆ ವಿಶೇಷ ಲಸಿಕಾ ಅಭಿಯಾನದಲ್ಲಿ ಅವರು ಮಾತನಾಡಿದರು.

ಲಸಿಕೆಗಳು 12 ಮಾರಣಾಂತಿಕ ಕಾಯಿಲೆಗಳಿಂದ ನಿಮ್ಮ ಮಕ್ಕಳನ್ನು ರಕ್ಷಣೆ ಮಾಡುತ್ತವೆ. 5 ವರ್ಷದಲ್ಲಿ 7 ಬಾರಿ ನಿಮ್ಮ ಮಕ್ಕಳನ್ನು ಲಸಿಕಾ ಕೇಂದ್ರಕ್ಕೆ ಕರೆತನ್ನಿ ಲಸಿಕೆ ಕೊಡಿಸಿ. ಮನೆಯ ಕೆಲಸಗಳನ್ನು ಮಾಡುವ ನೆಪ ಹೇಳಿ ಮಕ್ಕಳನ್ನು ಲಸಿಕಾ ವಂಚಿತರನ್ನಾಗಿ ಮಾಡಬೇಡಿ. ಇದು ನಿಮ್ಮ ಮಕ್ಕಳಿಗೆ ಮಾಡುವ ವಂಚನೆಯಾಗಿತ್ತದೆ ಎಂಬ ಅರಿವು ನಿಮಗಿರಲಿ ಎಂದು ಹೇಳಿದರು.

ಮಕ್ಕಳಿಗೆ ಆರು ತಿಂಗಳ ತನಕ ಎದೆ ಹಾಲನ್ನು ಬಿಟ್ಟು ಬೇರೆ ಏನನ್ನೂ



ಕೊಡಬೇಡಿ. ಆರು ತಿಂಗಳಿನ ನಂತರ ಎದೆ ಹಾಲಿನೊಂದಿಗೆ ಪೂರಕ ಆಹಾರ ನೀಡುತ್ತಾ ಕನಿಷ್ಠ 2 ವರ್ಷಗಳಿಗೂ ಹೆಚ್ಚು ಕಾಲ ಎದೆ ಹಾಲು ನೀಡುವುದು ತಪ್ಪಿಸಬೇಡಿ. ಇದರಿಂದ ಮಕ್ಕಳ ಬೆಳವಣಿಗೆ ಮತ್ತು ರೋಗ ನಿರೋಧಕ ಶಕ್ತಿ ಹೆಚ್ಚಾಗುತ್ತದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಮಕ್ಕಳ ಆರೈಕೆ ಸಮಯದಲ್ಲಿ ದಂಪತಿಗಳು ಅಂತರದ ಹೆರಿಗೆ ಸೂತ್ರವನ್ನು ಪಾಲಿಸುವುದು ಸೂಕ್ತ ಪರಿಹಾರ. ಆರೋಗ್ಯ ಇಲಾಖೆಯು ಹಲವಾರ ಕುಟುಂಬ ಯೋಜನೆಯನ್ನು ಉಚಿತ ಸೇವೆಯನ್ನು ನೀಡುತ್ತಿದೆ. ಮಹಿಳೆಯರಿಗೆ ನುಂಗುವ ಮಾತ್ರೆ, ವಂಕಿ ಅಳವಡಿಸುವುದು, ಅಂತರ ಚುಚ್ಚು ಮದ್ದು ನೀಡುವುದು, ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಿಸುವುದು, ಪುರುಷರಿಗೆ ನಿರೋಧ್ ಎನ್.ಎಸ್.ವಿ. ವಿಧಾನವಿದೆ. ದಂಪತಿಗಳು ತಮ್ಮ ಮಕ್ಕಳ ಮತ್ತು ಕುಟುಂಬದ ಸುಖಕ್ಕಾಗಿ ಈ ಉಚಿತ ಯೋಜನೆಯನ್ನು ನಿಮ್ಮದಾಗಿಸಿ ನಿಮ್ಮ ಮತ್ತು ಮಕ್ಕಳ ಆರೋಗ್ಯಕ್ಕಾಗಿ ಕುಟುಂಬದ ಶ್ರೇಯಸ್ಸಿಗಾಗಿ ಅನುಸರಿಸಿ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ, ಮಕ್ಕಳ ಲಸಿಕಾ ವೇಳಾಪಟ್ಟಿ ತಿಳಿಸಿ, ಕೋವಿಡ್–19 ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಸುಜಾತ, ಆಶಾ ಕಾರ್ಯಕರ್ತೆಯರಾದ ಪ್ರೇಮಾ, ರೇಣುಕ, ಮಕ್ಕಳು, ತಾಯಂದಿರು ಇದ್ದರು.

ಫಾಸ್ಟ್ ನ್ಯೂಸ್

## 2ನೇ ಹಂತದ ಎಸ್‌ಎಸ್‌ಎಲ್‌ಸಿ ಪರೀಕ್ಷೆ: ಮೊದಲ ದಿನವೇ 350 ವಿದ್ಯಾರ್ಥಿಗಳು ಗೈರು



» ಚಳ್ಳಕೆರೆ

ಪ್ರಸ್ತುತವರ್ಷದಎಸ್‌ಎಸ್‌ಎಲ್‌ಸಿಪರೀಕ್ಷೆಫಲಿತಾಂಶ ಮೇ.2ರಂದು ಪ್ರಕಟಗೊಂಡಿದ್ದು,ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮರುಪರೀಕ್ಷೆ ನಡೆಸಲಾಗುತ್ತಿದ್ದು, ಮೇ.26ರಿಂದ31ರ ತನಕ ತಾಲ್ಲೂಕಿನ ಐದು ಕೇಂದ್ರಗಳಲ್ಲಿ ಮರುಪರೀಕ್ಷೆ ನಡೆಯಲಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ಪತ್ರಿಕೆಗೆ ಮಾಹಿತಿ ನೀಡಿ, ತಾಲ್ಲೂಕಿನ ಒಟ್ಟು ಐದು ಕೇಂದ್ರಗಳಿಂದ 1355 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಅರ್ಹರಿದ್ದು, ಸೋಮವಾರ ನಡೆದ ಕನ್ನಡ ಪರೀಕ್ಷೆಗೆ 350 ವಿದ್ಯಾರ್ಥಿಗಳು ಗೈರಾಗಿದ್ದು, 1005 ವಿದ್ಯಾರ್ಥಿಗಳು ಪರೀಕ್ಷೆ ಬರೆದಿರುತ್ತಾರೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದಲ್ಲದೆ, ನಕಲು ಮಾಡದಂತೆ ಎಚ್ಚರಿಕೆ ವಹಿಸಲಾಗಿತ್ತು ಎಂದು ತಿಳಿಸಿದರು. ಕಳೆದ ಬಾರಿಗೆ ಹೋಲಿಸಿದಲ್ಲಿ ಈ ಬಾರಿ ಫೇಲಾದ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇದೆ. ಮರುಪರೀಕ್ಷೆ–2ರಲ್ಲೂ ವಿದ್ಯಾರ್ಥಿಗಳು ಹೆಚ್ಚಿನ ಅಂಕ ಪಡೆಯುತ್ತಾರೆಂಬ ವಿಶ್ವಾಸವಿದೆ. ಪರೀಕ್ಷೆಗೆ ಸಂಬಂಧಪಟ್ಟಂತೆ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೂ ಸುಮಾರು 20ದಿನಗಳ ಕಾಲ ವಿಶೇಷ ತರಗತಿಗಳನ್ನು ಏರ್ಪಡಿಸಿ ಮಾರ್ಗದರ್ಶನ ಮಾಡಲಾಯಿತು ಎಂದರು.

## ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಾತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

2025–26ನೇ ಸಾಲಿನಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಚಿತ್ರದುರ್ಗದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಆನ್‌ಲೈನ್ ಪ್ರವೇಶ ಪ್ರಕ್ರಿಯೆ ಮುಕ್ತಾಯವಾದನಂತರ ಭರ್ತಿಯಾಗದೇ ಉಳಿದಿರುವ ಪ್ರಥಮ ಸೆಮಿಸ್ಟರ್ ಡಿಪ್ಲೊಮಾ ಪ್ರವೇಶ ಸ್ಥಾನಗಳನ್ನು ಸಂಸ್ಥೆಯ ಹಂತದಲ್ಲಿ ಮೆರಿಟ್ ಕಮ್ ರೋಸ್ಟರ್ ಮೂಲಕ ಆಫ್‌ಲೈನ್ ಪ್ರಕ್ರಿಯೆ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ (ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ) ಅರ್ಜಿ ಆಹ್ವಾನಿಸಲಾಗಿದೆ. ಮೇ29 ಅರ್ಜಿ ಸಲ್ಲಿಸಲು ಕೊನೆಯ ದಿನ.

ಪ್ರವೇಶ ಪ್ರಕ್ರಿಯೆಯನ್ನು ಸಂಸ್ಥೆಯ ಹಂತದಲ್ಲಿ ಮೆರಿಟ್ ಕಮ್ ರೋಸ್ಟರ್ ಪದ್ಧತಿಯಲ್ಲಿ ನಡೆಸಲಾಗುವುದು.ಅಸಕ್ತ ಅಭ್ಯರ್ಥಿಗಳು ಮೇ. 26 ರಿಂದ ಮೇ.29 ರವರಗೆ www.dtek.karnatak.gov.inವೆಬ್‌ಸೈಟ್ ಮೂಲಕಅರ್ಜಿ ಹಾಗೂ ಮಾಹಿತಿ ಪುಸ್ತಕ ಪಡೆಯಬಹುದಾಗಿದೆ. ಭರ್ತಿಮಾಡಿದ ಅರ್ಜಿಯನ್ನು ಮೇ.29 ರಂದು ಸಂಜೆ 5.30 ಗಂಟೆಯೊಳಗೆ ಸಲ್ಲಿಸಬೇಕು. ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇ.35 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಮೇ. 30 ರಂದು ಬೆಳಿಗ್ಗೆ 10 ಗಂಟೆಯ ನಂತರ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಣೆ ಮಾಡಲಾಗುವುದು. ಮೇ.30 ರಂದು ಮೆರಿಟ್ ಪಟ್ಟಿಗೆ ಆಕ್ಷೇಪಣೆ ಮತ್ತು ತಿದ್ದುಪಡಿ ನಡೆಸಲಾಗುವುದು. ಮೇ.30ರಂದು ಬೆಳಿಗ್ಗೆ 11.30 ಗಂಟೆಯ ನಂತರ ಅಂತಿಮ ಮೆರಿಟ್ ಪಟ್ಟಿ ಪ್ರಕಟಣೆ ಮಾಡಲಾಗುವುದು. ಮೇ.30 ಮತ್ತು 31ರಂದು ಸೀಟು ಹಂಚಿಕೆ ಮಾಡಲಾಗುವುದು. ಸಂಸ್ಥೆಯ ಹಂತದಲ್ಲಿ ನಿಗಧಿತ ಅವಧಿಯಲ್ಲಿ ಸೀಟು ಹಂಚಿಕೆಯಾದ ನಂತರ ಭರ್ತಿ ಆಗದೆ ಉಳಿದ ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿಯೇ ಆಫ್‌ಲೈನ್ ಮೂಲಕ ಮೆರಿಟ್ ಮತ್ತು ರೋಸ್ಟರ್ ಅನುಗುಣವಾಗಿ ಸೀಟು ಹಂಚಿಕೆ ಮಾಡಲಾಗುವುದು ಎಂದು ಚಿತ್ರದುರ್ಗ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲ ಆರ್. ರಾಘವೇಂದ್ರಚಾರ್ ತಿಳಿಸಿದ್ದಾರೆ.

## ವಿವಿಧ ಯೋಜನೆಗಳ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ತೋಟಗಾರಿಕೆ ಇಲಾಖೆ ವತಿಯಿಂದ ವಿವಿಧ ಯೋಜನೆಗಳ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ರೈತರು ಅರ್ಜಿ ಸಲ್ಲಿಸಲು ಜೂನ್ 6 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ಸಮೀಪದ ರೈತ ಸಂಪರ್ಕ ಕೇಂದ್ರದ ಸಹಾಯ ತೋಟಗಾರಿಕೆ ಅಧಿಕಾರಿಯವರನ್ನು ಸಂಪರ್ಕಿಸಲು ತೋಟಗಾರಿಕೆ ಉಪನಿರ್ದೇಶಕರಾದ ರಾಘವೇಂದ್ರ ಪ್ರಸಾದ್ ತಿಳಿಸಿದ್ದಾರೆ.

### ಉಪವಿಭಾಗಾಧಿಕಾರಿ ಮಹಬೂಬ್ ಜೀಲಾನಿ ಖುರೇಷಿ ಹೇಳಿಕೆ

# ಮಕ್ಕಳ ಮನೋವಿಕಾಸಕ್ಕೆ ಬೇಸಿಗೆ ಶಿಬಿರ ಪೂರಕ

» ಚಿತ್ರದುರ್ಗ

ಮಕ್ಕಳ ಮನೋವಿಕಾಸಕ್ಕೆ ಬೇಸಿಗೆ ಶಿಬಿರಗಳು ಪೂರಕವಾಗಿರತ್ತವೆ ಉಪವಿಭಾಗಧಿಕಾರಿ ಮಹಬೂಬ್ ಜೀಲಾನಿ ಖುರೇಷಿ ಹೇಳಿದರು.

ರಾಜ್ಯ ಬಾಲಭವನ ಸೊಸೈಟಿ ,ಜಿಲ್ಲಾ ಪಂಚಾಯುತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಸಮಿತಿ ಸಹಯೋಗದಲ್ಲಿ ನಗರದ ಜಿಲ್ಲಾ ಬಾಲಭವನದಲ್ಲಿ 9ರಿಂದ 16ವರ್ಷದ ಒಳಗಿನ ಮಕ್ಕಳಿಗೆ ಮೇ 12 ರಿಂದ 26 ವರೆಗೆ ಹಮ್ಮಿಕೊಂಡಿದ್ದ ಮಕ್ಕಳ ಬೇಸಿಗೆ ಶಿಬಿರ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಮೊದಲು ಅಜ್ಜಿ ಮನೆಗಳಿಗೆ ಹೋಗಿ ಗ್ರಾಮೀಣ ಕ್ರೀಡೆ, ಈಜು, ಆಟ ಆಡುವ ಮೂಲಕ ಸದೃಡರಾಗಿದ್ದೆವು, ಇಂದು ಮಕ್ಕಳು ಮೋಬೈಲ್ ಮತ್ತು ಟಿ.ವಿಯನ್ನು ಬಳಕೆಯನ್ನುಹೆಚ್ಚುಮಾಡುತ್ತಾರೆ.ಇದರಿಂದ ಸರಿಯಾಗಿ ಊಟ ಮಾಡುವುದಿಲ್ಲ ಮತ್ತು ನಿದ್ದೆ ಮಾಡುವುದಿಲ್ಲ ಮಕ್ಕಳಿಗೆ ಮಾನಸಿಕ ಸಮಸ್ಯೆಗಳು ಕಂಡು ಬರುತ್ತವೆ, ಈ ಶಿಬಿರದಲ್ಲಿ ಯೋಗ, ಧ್ಯಾನ,ಶ್ಲೋಕ, ಪಾರಾಯಣ ಚಿತ್ರಕಲೆ, ಕರಕುಶಲತೆ,







ಅಭಾಕಾಸ್, ಸಮೂಹ ನೃತ್ಯ, ಸಂಗೀತ, ಮಾತನಾಡುವ ಗೊಂಬೆ, ಗಾಳಿಪಟ ತಯಾರಿಕೆ, ಅಭಿನಯ ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ರೀತಿಯ ಚಟುವಟಿಕೆ ಕಲಿಯುವ ಮೂಲಕ ಮಕ್ಕಳ ಮನೋವಿಕಾಸ ಮಾಡಿಕೋಳ್ಳಬೇಕು ಎಂದು ತಿಳಿಸಿ ಉಪವಿಭಾಗಧಿಕಾರಿ ಮಹಬೂಬ್ ಜೀಲಾನಿ ಭಾವೈಕ್ಯತೆಯ ಗೀತೆಯನ್ನು ಹಾಡಿ ಮಕ್ಕಳನ್ನು ರಂಜಿಸಿದರು,

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಭಾರತಿ. ಆರ್.ಬಣಕಾರ್ ಪ್ರಾಸ್ತಾವಿಕ ಮಾತನಾಡಿ, ಮಕ್ಕಳ ಸಮಯವನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಬೇಸಿಗೆ ಶಿಬಿರಗಳು ಮಕ್ಕಳಿಗೆ ಉಪಯೋಗವಾಗುತ್ತವೆ. ಸರ್ಕಾರಿ ಶಾಲೆಯ ಮಕ್ಕಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರಾಜ್ಯಭವನ ಭವನ ಸೊಸೈಟಿ ಬೆಂಗಳೂರು ವತಿಯಿಂದ 15 ದಿನಗಳು ಶಿಬಿರ ಆಯೋಜಿಸಲಾಗಿತ್ತು. ಶಿಬಿರದಲ್ಲಿ 103 ಮಕ್ಕಳು ನೊಂದಾಣಿಯಾಗಿದ್ದು ಯೋಗ, ಧ್ಯಾನ,ಶ್ಲೋಕ, ಪಾರಾಯಣ ಚಿತ್ರಕಲೆ, ಕರಕುಶಲತೆ, ಅಭಾಕಾಸ್, ಸಮೂಹ ನೃತ್ಯ, ಸಂಗೀತ, ಮಾತನಾಡುವ ಗೊಂಬೆ, ಗಾಳಿಪಟ ತಯಾರಿಕೆ, ಅಭಿನಯ ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ರೀತಿಯ ಚಟುವಟಿಕೆಗಳನ್ನು ಆಯೋಜಿಸಲಾಗಿದೆ ಎಂದರು.

ವಿಕಲಚೇತನರಕಲ್ಯಾಣಾಧಿಕಾರಿವೈಶಾಲಿ ,ಜೆ ಮಾತನಾಡಿ ಮಕ್ಕಳು ಪಠ್ಯೇತರ ಚಟುವಟಿಕೆಗಳನ್ನು ಕಲಿಯುವ ಮೂಲಕ ಉತ್ತಮ ಸಂಸ್ಕಾರವನ್ನು ಪಡೆಯುತ್ತಾರೆ. ಮಕ್ಕಳ ಬೇಸಿಗೆ ಶಿಬಿರದಿಂದ ಜ್ಞಾನಾರ್ಜನೆ ಯಾಗುತ್ತದೆ, ಎಂದರು.

ಕಾರ್ಯಕ್ರಮದಲ್ಲಿ ಶಿಬಿರದಲ್ಲಿ ಭಾಗವಹಿಸಿದ್ದ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ಮಿತರಿಸಲಾಯಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ಎನ್, ಜಿಲ್ಲಾ ಮಕ್ಕಳ ರಕಣಾಧಿಕಾರಿ ಸವಿತ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ.ಎ.ಎಂ, ಬೆಂಗಳೂರು ಋಷಿ ಸಂಸ್ಕೃತಿ ವಿದ್ಯಾಕೇಂದ್ರ ಯೋಗ ಗುರು ಸಂಪನ್ಮೂಲವ್ಯಕ್ತಿ ಎಸ್.ಕುಮಾರಸ್ವಾಮಿ, ಸಾಧನಾ ಅಕಾಡೆಮಿಯ ತಿಪ್ಪೇರುದ್ರಪ್ಪ. ಎಚ್,ಚಿತ್ರಕಲೆ ಶಿಕ್ಷಕಿ ಮಂಜುಳ ಅವನೂರು, ನೃತ್ಯ ಶಿಕ್ಷಕ ನಿರ್ಮಲ,ಬಿ, ಉಪಸ್ಥಿರಿದ್ದರು.

# ಅಂತಃಸತ್ವದ ಅನಾವರಣಕ್ಕೆ ಗಮಕ ಕಲೆ ಸಹಕಾರಿ

» ಚಿತ್ರದುರ್ಗ

ನಗರದ ಗಮಕ ಕಲಾಭಿಮಾನಿಗಳ ಸಂಘವು ಎಷ್ಟೇ ಅಡೆ ತಡೆಗಳು ಬಂದರೂ ಕಷ್ಟ ಕಾರ್ಪಣ್ಯಗಳು ಉಂಟಾದರೂ ನಿರಂತರವಾಗಿ ಗಮಕ ಕಲೆಯ ಪ್ರಚಾರ ಹಾಗೂ ಪ್ರಸಾರಕ್ಕಾಗಿ ಶ್ರಮಿಸುತ್ತಿರುವುದು ಶ್ಲಾಘನೀಯ ಎಂದು ಸ್ಥಳೀಯ ಬಾಪೂಜಿ ವಿದ್ಯಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳು ಹಾಗೂ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಕೆ.ಎಂ. ವೀರೇಶ್ ಅವರು ಅಭಿಪ್ರಾಯಪಟ್ಟರು.

ಅವರು ಇಲ್ಲಿನ ಗಮಕ ಕಲಾಭಿಮಾನಿಗಳ ಸಂಘವು ಜೆ ಸಿ ಆರ್ ಗಣಪತಿ ದೇವಾಲಯದಲ್ಲಿ ದಿನಾಂಕ 25/5/2025ರ ಸಂಜೆ ಸಂಘದ ನಲವತ್ತನೇ ವಾರ್ಷಿಕೋತ್ಸವದ ನೆನಪಿಗಾಗಿ ನಡೆಸಿಕೊಟ್ಟ 22ನೇ ಮಾಸಿಕ ಗಮಕ ವಾಚನ ವ್ಯಾಖ್ಯಾನದಲ್ಲಿಮುಖ್ಯಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು ನಾನು ಬಹುಕಾಲದಿಂದ ಅದರ ಕಾರ್ಯ ಚಟುವಟಿಕೆಗಳನ್ನು ಗಮನಿಸುತ್ತಾ ಬಂದಿದ್ದೇನೆ. ಅನೇಕ ಕಾರ್ಯಕ್ರಮಗಳಲ್ಲಿ ಸಕ್ರೀಯವಾಗಿ ಪಾಲ್ಗೊಂಡಿದ್ದೇನೆ.

ನಮ್ಮ ಸಂಸ್ಥೆಯಲ್ಲಿಯೂ ಗಮಕ ಕಾರ್ಯಕ್ರಮಗಳನ್ನು ಆಯೋಜಿಸಿ ಆನಂದಿಸಿದ್ದೇನೆ. ಇಂಥ ಸಂಸ್ಥೆಗೆ ಎಲ್ಲಾ ಕಡೆಯಿಂದಲೂ ಬೆಂಬಲ ಪ್ರೋತ್ಸಾಹ ಅತ್ಯಗತ್ಯ. ಕನ್ನಡ ಭಾಷೆಯ ಅಂತಃಸತ್ವವನ್ನು ಎತ್ತಿ ಹಿಡಿಯಲು ಗಮಕ ಕಲೆಯು ಅಗತ್ಯ ಎಂಬುದು ಸರ್ವವೇದ್ಯ ಎಂದವರು ಅಭಿಮಾನ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಗಮಕ ಕಾರ್ಯಕ್ರಮದ ಚಟುವಟಿಕೆಗಳಿಗಾಗಿ 10,000ರೂಗಳ(ಹತ್ತು ಸಾವಿರ)ನೆರವನ್ನು ದೇಣಿಗೆಯ ರೂಪದಲ್ಲಿ ನೀಡಿದರು.ಕಾರ್ಯಕ್ರಮದ ಅಂಗವಾಗಿ ಕುಮಾರವ್ಯಾಸ ಭಾರತದ "ಭೀಷ್ಮ ಪರ್ವದ ಭೀಷ್ಮ ಗೆಲ್ಲಿದನು ವರ ಸುದರ್ಶನವ" ಎಂಬ ಕಾವ್ಯ ಭಾಗವನ್ನು ವಿದೂಷಿ ಚಂಪಕಾಶ್ರೀಧರ್ ಶಿಷ್ಯೆ ಗಮಕಿ ಅಂಶು ಅನಂತ್ ಅವರ ಸುರಸ ಕಾವ್ಯ ವಾಚನಕ್ಕೆ ವ್ಯಾಖ್ಯಾನ ಪರಿಣತ ಪಿ .ಅಂತಕೃಷ್ಣ ಅರ್ಥಪೂರ್ಣ ವ್ಯಾಖ್ಯಾನ ನೀಡಿದರು. ವಿಶೇಷವಾಗಿ ಚಕ್ರಾಯುಧ ಪ್ರಯೋಗ ಮಾಡಿದ ಶ್ರೀ ಕೃಷ್ಣ ನನ್ನು ಕುರಿತು ಕಲಿಭೀಷ್ಮನು ಆಡಿದ ಆರ್ದ್ರ ಹೃದಯದ ಮಾತುಗಳು ಬಾವುಕ ಶೋತೃಗಳನ್ನು ವಿಚಲಿತಗೊಳಿಸಿದವು.ಶಶಿಧರ್ ಶಾನುಭೋಗ್ ಅವರ ಗಮಕ ಪ್ರಾರ್ಥನೆಯೊಂದಿಗೆ ಆರಂಭವಾದ ಸಭೆಯಲ್ಲಿ ಬಿ. ಎಲ್.ಉಮಾ ಸ್ವಾಗತಿಸಿದರು.ಸಂಘದ ಅಧ್ಯಕ್ಷರಾದ ಕೆ .ಆರ್. ರಮಾದೇವಿ ವೆಂಕಣ್ಣಾಚಾರ್ ತಮ್ಮ ಅಧ್ಯಕ್ಷ ಭಾಷಣದಲ್ಲಿ ಇಂತಹ ಕಾರ್ಯಕ್ರಮಕ್ಕೆ ಬಂದು ತಮ್ಮ ಅಮೂಲ್ಯವಾದ ಸಮಯವನ್ನು ಕಳೆದು ದಾಸೋಹ ರೂಪದಲ್ಲಿ ಸಂಘಕ್ಕೆ ದೇಣಿಗೆ ನೀಡಿದ ಕೆ.ಎಂ. ವೀರೇಶ್ ಅವರಿಗೆ ಅಭಿನಂದನೆ ಸಲ್ಲಿಸಿ ಸಮಾರಂಭಕ್ಕೆ ಬಂದ ಎಲ್ಲರಿಗೂ ವಂದಿಸಿದರು.ಪ್ರಕಾಶ, ಹರೀಶ್, ಚಿದಾನಂದಪ್ಪ, ಪದ್ಮಕುಮಾರಿ ,ಸಾವಿತ್ರಮ್ಮ, ರೇಣುಕಾರಾಜು, ಶಾಂತಮ್ಮ ,ನಂಜುಂಡರಾವ್, ಡಾ.ರಾಜೀವಲೋಚನ ಉಪಸ್ಥಿತರಿದ್ದರು.




**ಮುಂದಿನ ಮಾಸಿಕ:–** ಮುಂದಿನ ಮಾಸಿಕ ಗಮಕದ 23ನೇ ಕಾರ್ಯಕ್ರಮ ಜೂನ್ 29ರ ಭಾನುವಾರ ಸಂಜೆ 6 ಗಂಟೆಗೆ ಜೆಸಿಆರ್ ಗಣಪತಿ ದೇವಾಲಯದಲ್ಲಿ ನಡೆಯಲಿದೆ. ನಗರದ ಸ್ವಾರಾತ್ಮಿಕ ಸಂಗೀತ ಶಾಲೆಯ ಬಾಲಕಲಾವಿದರು ದೇವರ ನಾಮ ಹಾಗೂ ಗಮಕ ಪದ್ಯಗಳನ್ನು ಹಾಡುವರೆಂದು ಸಂಘಟನೆ ತಿಳಿಸಿದೆ.

## ಬಾಲಕಾರ್ಮಿಕ ಪುನರ್ವಸತಿ ಸಮಿತಿ ಸಭೆ



» ಚಿತ್ರದುರ್ಗ

ಹೊಳಲ್ಕೆರೆ ತಹಶೀಲ್ದಾರ್ ಕಚೇರಿಯಲ್ಲಿ ಸೋಮವಾರ ತಹಶೀಲ್ದಾರ್ ಬೀಬಿ ಫಾತಿಮಾ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಪುನರ್ವಸತಿ ಸಮಿತಿ ಸಭೆ ನಡೆಯಿತು. ಮುಂಬರುವ ಜೂನ್ 12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಲುವಾಗಿ ಸಭೆಯಲ್ಲಿ ಚರ್ಚಿಸಲಾಯಿತು.

ಜೂನ್ 12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಅಂಗವಾಗಿ ವಿವಿಧ ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮ ಹಾಗೂ ಕಚೇರಿಗಳಲ್ಲಿ ಬಾಲ ಕಾರ್ಮಿಕ ನಿಷೇಧ ಕುರಿತು ಪ್ರಮಾಣ ವಚನ ಸ್ವೀಕರಿಸುವುದು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯಿತಿ ವತಿಯಿಂದ ತಾಲ್ಲೂಕಿನ ಎಲ್ಲಾ ಗ್ರಾಮಗಳಲ್ಲಿ ಹಾಗೂ ಪುರಸಭೆ ವತಿಯಿಂದ ಕಸದ ವಾಹನಗಳಲ್ಲಿ ಬಾಲ ಕಾರ್ಮಿಕ ನಿಷೇಧ ಕುರಿತು ಆಡಿಯೋ ರೆಕಾರ್ಡಿಂಗ್ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ತಿಳಿಸಿದ ಅವರು, ಎಲ್ಲ ತಾಲ್ಲೂಕು ಮಟ್ಟದ ಅಧಿಕಾರಿಗಳು ಜೂನ್ 12ರಂದು ನಡೆಯುವ ಜಾಥಾ ಕಾರ್ಯಕ್ರಮ ಹಾಗೂ ಜೂನ್ 12ರ ನಂತರ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಕುರಿತ ಅಭಿಯಾನವನ್ನು ಜೂನ್ 30 ರವರೆಗೆ ನಡೆಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಕಾರ್ಮಿಕ ನಿರೀಕ್ಷಕ ಡಿ.ರಾಜಣ್ಣ, ಬಾಲಕಾರ್ಮಿಕ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.



ಬೆಂಗಳೂರಿನಿಂದ ರಾಯಚೂರಿಗೆ ಹೆಲಿಕಾಪ್ಟರ್ ಮೂಲಕ ಸೋಮವಾರ ತೆರಳುವ ಮಾರ್ಗ ಮಧ್ಯೆ ವಿಶ್ರಾಂತಿಗೆ ಚಿತ್ರದುರ್ಗದಲ್ಲಿ ಕೆಲಕಾಲ ತಂಗಿದ್ದರಾಜ್ಯಪಾಲ ಥಾವರ್‌ಚಂದ್‌ಗೆ ಹ್ಲೋಟ್‌ಅವರನ್ನು, ಮಾಜಿ ಸಚಿವಎಚ್.ಆಂಜನೇಯ ಗೌರವಿಸಿದರು. ಸಚಿವಚೆಲುವ ನಾರಾಯಣಸ್ವಾಮಿ, ಯುವ ಮುಖಂಡರವಿ ಬೋಸರಾಜ್ ಇದ್ದರು.

## ಪಗಡಲಬಂಡೆ ಗ್ರಾಪಂ ಅಧ್ಯಕ್ಷರಾಗಿ ಎನ್.ಮಹಾದೇವಪ್ಪ ಅವಿರೋಧ ಆಯ್ಕೆ



» ಪರಶುರಾಂಪುರ

ಸಮೀಪದ ಪಗಡಲಬಂಡೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಎನ್.ಮಹಾದೇವಪ್ಪ ಅವರು ಅವಿರೋಧವಾಗಿ ಸೋಮವಾರ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಬಿಇಓ ಸುರೇಶ್ ತಿಳಿಸಿದರು. ಈ ಹಿಂದೆ ಇದ್ದ ಗ್ರಾಪಂ ಅಧ್ಯಕ್ಷ ತಿಮ್ಮರಾಯಪ್ಪ ಅವರು ಹೃದಯಾಘಾತದಿಂದ ನಿಧನರಾದ ಹಿನ್ನೆಲೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಎನ್.ಮಹಾದೇವಪ್ಪ ಅವರು ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾದರು. ನೂತನ ಅಧ್ಯಕ್ಷ ಎನ್.ಮಹಾದೇವಪ್ಪ ಮಾತನಾಡಿ, ಪಗಡಲಬಂಡೆ ಗ್ರಾಮ ಪಂಚಾಯಿತಿಯನ್ನ ಸರ್ಕಾರದ ವಿವಿಧ ಅನುದಾನಗಳನ್ನು ಪಡೆಯುವ ಮೂಲಕ ಪಂಚಾಯಿತಿಯ ಸಮಗ್ರ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು ಎಂದರು. ಈ ವೇಳೆಯಲ್ಲಿ ಚುನಾವಣಾಧಿಕಾರಿ ಸುರೇಶ್, ಸಹಾಯಕ ಶ್ರೀಧರ್, ಪಿಡಿಓ ಬಸವರಾಜು ಸೇರಿದಂತೆ ಗ್ರಾಪಂ ಸದಸ್ಯರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

# ದಲಿತ ವಿಮೋಚನೆಯ ಮಾನವ ಹಕ್ಕುಗಳ ವೇದಿಕೆಯಿಂದ ಬೇಡಿಕೆ ಈಡೇರಿಕೆಗೆ ಒತ್ತಾಯ

» ಚಳ್ಳಕೆರೆ


ದಲಿತ ವಿಮೋಚನೆಯ ಮಾನವ ಹಕ್ಕುಗಳ ವೇದಿಕೆವತಿಯಿಂದ ವಿವಿಧ ಬೇಡಿಕೆಗಳ ಹಕ್ಕೋತ್ತಾಯಿಸಿ ನಗರದ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಸೋಮವಾರ ರಾಜ್ಯ ಸಂಘಟನಾಸಂಚಾಲಕಭೀನಮಕೆರೆಶಿವಮೂರ್ತಿ ನೇತೃತ್ವದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ತಾಲ್ಲೂಕಿನ ಯಲಗಟ್ಟೆ ಗ್ರಾಮದ ದಲಿತರು ನಿವೇಶನಕ್ಕಾಗಿ ಪಡೆದ ರಿ, ಸರ್ವೆ, ನಂ 24 ಭೂಮಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಅಳತೆ ಮಾಡಿಸಿ ಸ್ವಾಧೀನ ಕೊಡಿಸಬೇಕು, ನಾಯಕನಹಟ್ಟಿ ಠಾಣಾ ವ್ಯಾಪ್ತಿಯ ರಾಮದುರ್ಗದ ದುರ್ಗಮ್ಮ ಎಂಬುವವರ ಚಿನ್ನದ ಸರ ಕಳ್ಳತನವಾಗಿದ್ದು ಪೊಲೀಸರು ಕಳ್ಳರನ್ನು ಪತ್ತೆಹಚ್ಚಿ ನ್ಯಾಯದೊರಕಿಸಿಕೊಡಬೇಕು. ಗೋರ್ಲಕಟ್ಟೆ ಗ್ರಾಮದ ಜಯಲಕ್ಷ್ಮಿ ಇವರ ನಿವೇಶನಕ್ಕೆ ಒತ್ತುವರಿ ಮಾಡಿದ ದಾರಿಯನ್ನು ತೆರವುಗೊಳಿಸಬೇಕು, ಚಿಕ್ಕಮ್ಮನಹಳ್ಳಿ ರಿ.ಸರ್ವೆ, ನಂ 13, ವರವು ರಿ.ಸರ್ವೆ, ನಂ. 34 ದರಖಾಸ್ ಭೂಮಿಗೆ ಓಡಾಡಲು ದಾರಿ ಕಲ್ಪಿಸಬೇಕೆಂಬ ಬೇಡಿಕೆಗಳನ್ನು ಮುಂದಿಟ್ಟು ಪ್ರತಿಭಟನೆ ನಡೆಸಲಾಯಿತು.



ತಹಶೀಲ್ದಾರ್ ರೇಹಾನ್‌ಪಾಷಮನವಿ ಸ್ವೀಕರಿಸಿ ತಮ್ಮ ಮನವಿಯಲ್ಲಿರುವ ಭೇಡಿಕೆ ಈಡೇರಿಕೆ ಕುರಿತಂತೆ ಮಾನ್ಯ ಜಿಲ್ಲಾಧಿಕಾರಿಗಳಿಗೆ ತಮ್ಮ ಮನವಿಯನ್ನು ಇಂದೆ ಕಳಿಸಿಕೊಡಲಾಗುವುದು. ತಾಲ್ಲೂಕು ಆಡಳಿತದಿಂದ ಯಾವುದೇ ಲೋಪದೋಷವಾಗದೆ ಜನಾಂಗದ ಸಮಸ್ಯೆಗೆ ಪರಿಹಾರ ಕಲ್ಪಿಸಿಕೊಡಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲಾ ಸಂಘಟನಾ ಸಂಚಾಲಕಿ ಪಿ.ರೇಣುಕಮ್ಮ, ಎನ್.ಪ್ರಕಾಶ್, ಪಿ.ಜಯಣ್ಣ, ಮಾರುತಿ, ಮಂಜುನಾಥ, ತಾಲ್ಲೂಕು ಸಂಚಾಲಕ ತಿರುಮಲೇಶ್, ಸತೀಶ್, ಎಂ.ರಾಜಣ್ಣ, ಪಾತಲಿಂಗಪ್ಪ, ಮೈಲಾರಿ ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ಚಳ್ಳಕೆರೆ ನಗರದ ಚಿತ್ರದುರ್ಗ ರಸ್ತೆಯಲ್ಲಿರುವ ಇಸ್ಕಾನ್ ಭಕ್ತಿ ಕೇಂದ್ರದಲ್ಲಿ ಲೋಕಕಲ್ಯಾಣಾರ್ಥವಾಗಿ ಹೋಮ ನಡೆಸಲಾಯಿತು.

## ಫಾಸ್ಟ್ ನ್ಯೂಸ್

### ಕಾಣೆಯಾದವರ ಪತ್ತೆ ನೆರವಿಗೆ ಮನವಿ

» **ಚಿತ್ರದುರ್ಗ**

ಪ್ರತ್ಯೇಕ ಪ್ರಕರಣಗಳಲ್ಲಿ ವ್ಯಕ್ತಿಗಳು ಕಾಣೆಯಾದ ಕುರಿತು ಭರಮಸಾಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿವೆ. 26 ಡಿಸೆಂಬರ್ 2024 ರಂದು ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಹೋಬಳಿ ಇಸಾಮುದ್ರ ಗ್ರಾಮದ ರೇಖಾ ಗಂಡ ಲೇಟ್ ತಿಪ್ಪೇಸ್ವಾಮಿ (20) ಕಾಣೆಯಾದ ಕುರಿತು ದೂರು ದಾಖಲಾಗಿದೆ. ಕಾಣೆಯಾದ ರೇಖಾ ಕೋಲು ಮುಖ, ಐದು ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಸಾಧರಣ ಮೈಕಟ್ಟು, ಹೊಂದಿರುತ್ತಾರೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾರೆ. ಮುಂಗೈ ಮೇಲೆ ಇಂಗ್ಲೀಷ್ ಅಕ್ಷರದ ಟ್ಯಾಟುಯಿದೆ. ಮನೆಯಿಂದ ಹೋಗುವಾಗ ಕಂಪು ಬಣ್ಣದ ಚೂಡಿದಾರ್ ಧರಿಸಿರುತ್ತಾಳೆ. 24 ಏಪ್ರಿಲ್ 2025 ರಂದು ಶ್ವೇತ ಮಾದರ್ ಗಂಡ ಗಣೇಶ್ ಮಾಧರ್(30), ತನ್ನ ಮಕ್ಕಳಾದ ಗಿರೀಶ್(8) ಹಾಗೂ ಯಶೀಕಾ(6) ಅವರೊಂದಿಗೆ ಕಾಣೆಯಾದ ಕುರಿತು ದೂರು ದಾಖಲಾಗಿದೆ. ಶ್ವೇತಾ ಮಾದರ್ 4.5 ಅಡಿ ಎತ್ತರ, ಕೋಲು ಮುಖ, ಸಾಧರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಬಲ್ಲವರಾಗಿರುತ್ತಾರೆ. ಮನೆಯಿಂದ ಹೋಗುವಾಗ ಕೆಂಪು ನೈಟಿ ಧರಿಸಿರುತ್ತಾರೆ. ಗಿರೀಶ್ 2.5 ಅಡಿ ಎತ್ತರವಿದ್ದು, ಮನೆಯಿಂದ ಹೋಗುವಾಗ ಕಾಫಿ ಕಲರ್ ಟೀ ಷರ್ಟ್, ಬಳಿ ಪ್ಯಾಂಟ್ ಧರಿಸಿರುತ್ತಾರೆ. ಯಶಿಕಾ 2.5 ಅಡಿ ಎತ್ತರವಿದ್ದು, ಮನೆಯಿಂದ ವೈಟ್ ಪ್ರಾಕ್ ಧರಿಸಿರುತ್ತಾರೆ. ಇವರು ಗುರುತು ಪತ್ತೆಯಾದವರು ಭರಮಸಾಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08194-258421, 9480803163 ಹಾಗೂ ಕಂಟ್ರೋಲ್ ರೂಮ್ ಸಂಖ್ಯೆ 08194-222782 ಕರೆ ಮಾಡುವಂತೆ ಪ್ರಕಟಣೆ ತಿಳಿಸಲಾಗಿದೆ.

### ಡಿ.ಪಿ.ಎಸ್.ಇ ಕೋರ್ಸ್: ಪ್ರವೇಶಕ್ಕೆ ಅರ್ಜಿ

» **ಹೊಸದುರ್ಗ**

ಪಟ್ಟಣದ ಸರ್ಕಾರಿ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಡಿ.ಪಿ.ಎಸ್.ಇ ಕೋರ್ಸ್ (ಡಿಪ್ಲೊಮಾ ಇನ್ ಫ್ರೀ ಸ್ಕೂಲ್ ಎಜುಕೇಷನ್) 2025-26ನೇ ಶೈಕ್ಷಣಿಕ ವರ್ಷದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು ಅರ್ಜಿ ಸಲ್ಲಿಸಲು ಜೂನ್-5 ಕೊನೆಯ ದಿನವಾಗಿದೆ ಎಂದು ಪ್ರಭಾರೆ ಪ್ರಾಂಶುಪಾಲ ಎನ್. ರಾಮಚಂದ್ರಪ್ಪ ತಿಳಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಪೂರ್ವ ಪ್ರಾಥಮಿಕ ತರಗತಿಗೆ (ಎಲ್.ಕೆ.ಜಿ/ಯು.ಕೆ.ಜಿ) ಬೋಧಿಸಲು ಡಿಪಿಎಸ್ಇ ಕೋರ್ಸ್ ಪೂರಕವಾಗಿದೆ. ಹೊಸದುರ್ಗ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ 2 ವರ್ಷ ಅವಧಿಯ ಈ ಕೋರ್ಸ್ ನಡೆಯುತ್ತಿದ್ದು ತರಬೇತಿ ಪಡೆದವರು ಪೂರ್ವ ಪ್ರಾಥಮಿಕ ತರಗತಿಗೆ ಬೋಧಿಸಲು ಅರ್ಹತೆ ಪಡೆಯುತ್ತಾರೆ ತರಬೇತಿ ಪಡೆಲಿಚ್ಚಿಸುವವವರು ದ್ವಿತೀಯ ಪಿ.ಯು.ಸಿಯಲ್ಲಿ ಎಸ್‌ಸಿ/ಎಸ್‌ಟಿ/ಪ್ರವರ್ಗ-1/ವಿಕಲಚೇತನ ಅಭ್ಯರ್ಥಿಗಳು ಕನಿಷ್ಟ ಶೇ-45 ಹಾಗೂ ಇತರೆ ಅಭ್ಯರ್ಥಿಗಳು ಕನಿಷ್ಟ ಶೇ-50ರಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದಾಗಿದ್ದು ಈ ಕೋರ್ಸ್‌ನ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗೆ ಮೊ.ಸಂ. 9980674494, 9686841952 ಅಥವಾ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ ಕಚೇರಿ ಸಂಪರ್ಕಿಸಬಹುದು ಎಂದು ತಿಳಿಸಿದರು.

### ಗ್ರಾಮೀಣ ಭಾಗದಲ್ಲೂ ಕ್ರಿಕೆಟ್ ಆಟ ಜನಪ್ರಿಯ ಕ್ರೀಡೆಯಾಗಿದೆ: ಎಂ.ಹಿದಾಯಿತುಲ್ಲಾ



» **ಚಳ್ಳಕೆರೆ**

ಗ್ರಾಮೀಣ ಭಾಗದ ಯುವಕರಿಗೂ ಸಹ ಕ್ರಿಕೆಟ್ ಆಟ ಉತ್ತಮ ಮನೋರಂಜನೆ ಜೊತೆಗೆ ಕ್ರೀಡಾಸ್ಪೂರ್ತಿಯನ್ನು ತುಂಬುವ ಆಟವಾಗಿದೆ. ಪ್ರತಿಯೊಂದು ಗ್ರಾಮದಲ್ಲೂ ನಾವು ಕ್ರಿಕೆಟ್ ಆಟವನ್ನು ನೋಡಬಹುದಾಗಿದೆ. ಎಲ್ಲಾ ಕ್ರೀಡೆಗಳನ್ನು ಗೌರವಿಸುವ ಮನೋಭಾವವನ್ನು ನಾವೆಲ್ಲರೂ ಬೆಳೆಸಿಕೊಳ್ಳಬೇಕೆಂದು ಗ್ರಾಮ ಪಂಚಾಯಿತಿ ಸದಸ್ಯ ಎಂ.ಹಿದಾಯಿತುಲ್ಲಾ ತಿಳಿಸಿದರು. ಅವರು, ಸೋಮವಾರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ನಗರಂಗೆರೆ ಪ್ರೀಮಿಯರ್‌ಲೀಗ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಗೆಲುವು ಸಾಧಿಸಿದ ತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು. ಪ್ರತಿಯೊಬ್ಬ ಆಟಗಾರನು ಕ್ರೀಡೆಯ ಮಹತ್ವ ಮತ್ತು ಮೌಲ್ಯವನ್ನು ಎತ್ತಿಹಿಡಿಯುವ ಕಾರ್ಯ ಮಾಡಬೇಕೆಂದರು. ಇದೇ ಸಂದರ್ಭದಲ್ಲಿ ಗೆಲುವು ಸಾಧಿಸಿದ ಗ್ರಾಮದ ಎಸ್‌ಆರ್‌ಬಿ ತಂಡ ಮೊದಲನೇ ಸ್ಥಾನ, ಆರ್‌ಸಿಬಿ ತಂಡ ಎರಡನೇ ಸ್ಥಾನ ಪಡೆದುಕೊಂಡಿದ್ದು ಎಲ್ಲಾ ಆಟಗಾರರಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮದಹಿರಿಯಮುಖಂಡರಾದಎಂ.ಸಂಜೀವಪ್ಪ, ಆಜ್ಮತ್‌ವುಲ್ಲಾ, ಕೆ.ಸುರೇಶ್, ರಾಮಚಂದ್ರನಾಯಕ, ಸುದರ್ಶನ್, ಎನ್.ಡಿ.ತಿಪ್ಪೇರುದ್ರಪ್ಪ, ರಂಗನಾಥ, ಬಾಬು, ನಿಂಗರಾಜು, ಮೈಲಾರಪ್ಪ, ಪ್ರೇಮ್, ರಾಜು, ಬೋರೇಶ್‌ಯಾದವ್, ಶ್ರೀನಿವಾಸ್‌ಹಾಯ್ಕಲ್, ಕೆ.ಬಿ.ನಾಗರಾಜು, ಶ್ರೀಧರ ಭಾಗವಹಿಸಿದ್ದರು.

**ಉಪಲೋಕಾಯುಕ್ತರ ಭೇಟಿ ಎಫೆಕ್ಟ್**

# 13 ವಿವಿಧ ಸ್ವಯಂಪ್ರೇರಿತ ದೂರು ದಾಖಲು

## ಶಾಂತಿಸಾಗರ ಕೆರೆ ಒತ್ತುವರಿ ತೆರವು, ಸಂರಕ್ಷಣೆಗೆ ಒತ್ತು, 27 ಅಧಿಕಾರಿಗಳ ಮೇಲೆ ದೂರು ದಾಖಲು

» **ದಾವಣಗೆರೆ**

ಕರ್ನಾಟಕ ಉಪಲೋಕಾಯುಕ್ತರು ಹಾಗೂ ನ್ಯಾಯಮೂರ್ತಿಗಳಾದ ಬಿ.ವೀರಪ್ಪನವರು ಏಪ್ರಿಲ್ 22 ರಿಂದ 26 ರ ವರೆಗೆ ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡ ವೇಳೆ ಆಡಳಿತದಲ್ಲಿ ನ್ಯೂನ್ಯತೆ ಕಂಡು ಬಂದು ಪ್ರಕರಣಗಳನ್ನು ಪತ್ತೆಹಚ್ಚಿ 13 ವಿವಿಧ ಇಲಾಖೆ ಅಧಿಕಾರಿಗಳ ಮೇಲೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಅನುಪಾಲನಾ ವರದಿ ನೀಡಲು ಸೂಚನೆ ನೀಡಲಾಗಿದೆ.

ಉಪಲೋಕಾಯುಕ್ತರು ಮತ್ತು ಲೋಕಾಯುಕ್ತ ಅಪರ ನಿಬಂಧಕರು, ಉಪನಿಬಂಧಕರು ಸೇರಿದಂತೆ ಲೋಕಾಯುಕ್ತ ಹಿರಿಯ ಪೊಲೀಸ್ ಅಧಿಕಾರಿಗಳು ಪ್ರವಾಸದ ವೇಳೆ ಭಾಗಿಯಾಗಿದ್ದರು. ಈ ವೇಳೆ ವಿವಿಧ ಇಲಾಖೆಗಳಿಗೆ ಭೇಟಿ ನೀಡಲಾಗಿತ್ತು. ಮತ್ತು ಶಾಂತಿಸಾಗರ ಕೆರೆ ಸೇರಿದಂತೆ ಕಲ್ಲುಗಣಿಗಾರಿಕೆಮಾಡುತ್ತಿರುವಸ್ಥಳಗಳಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಈ ವೇಳೆ ಲೋಪದೋಷಗಳು ಕಂಡು ಬಂದ ಇಲಾಖೆಅಧಿಕಾರಿಗಳಮೇಲೆಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದ್ದು ಮುಂದುವರೆದಿದೆ.

ಶಾಂತಿಸಾಗರ ಕೆರೆ ಒತ್ತುವರಿ; ಶಾಂತಿಸಾಗರ ಕೆರೆ 5447.10 ಎಕರೆ ವಿಸ್ತೀರ್ಣ ಹೊಂದಿದೆ. ಆದರೆ ಚಿಕ್ಕೋಡಾ ಹಿನ್ನೀರಿನಲ್ಲಿ 146 ಎಕರೆ ಹಿನ್ನೀರಿನಲ್ಲಿ ಒತ್ತುವರಿಯಾಗಿದೆ ಎಂದು ಕಂಡು ಬಂದಿರುತ್ತದೆ. ಮತ್ತು ಕೆರೆಯಲ್ಲಿನ ಹೂಳು ತೆಗೆದು ಹೆಚ್ಚಿನ ನೀರು ಸಂಗ್ರಹಿಸಲು ಅವಕಾಶ ಇದೆ. ಇಲ್ಲಿ ಪ್ರವಾಸೋದ್ಯಮ ಅಭಿವೃದ್ದಿ, ಪರಿಸರ ಸಂರಕ್ಷಣೆ ಸೇರಿದಂತೆ ಸುತ್ತಮುತ್ತಲಿನ 41 ಗ್ರಾಮಗಳು ಬರಲಿದ್ದು ನೈರ್ಮಲ್ಯತೆ ಕಾಪಾಡಿಕೊಳ್ಳುವುದು ಮತ್ತು ಶೌಚಾಲಯದ ನೀರನ್ನು ಕೆರೆಗೆ ಬಿಡದಂತೆ ಕ್ರಮವಹಿಸಬೇಕು. ಈ ಬಗ್ಗೆ ಹೊನ್ನಾಳಿ ಎಸಿ, ಚನ್ನಗಿರಿ ತಹಶೀಲ್ದಾರ್, ಪಂಚಾಯತ್ ರಾಜ್ ಇಂಜಿನಿಯರಿಂಗ್, ಗ್ರಾಮೀಣ ಕುಡಿಯುವ ನೀರು, ಜಲಸಂಪನ್ಮೂಲ, ಪರಿಸರ, ಪ್ರವಾಸೋದ್ಯಮ ಇಲಾಖೆ ಸೇರಿದಂತೆ ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳು ಸೇರಿದಂತೆ 12 ನ್ಯೂನ್ಯತೆಗಳನ್ನು ಉಲ್ಲೇಖಿಸಿ 27 ಅಧಿಕಾರಿಗಳ ಮೇಲೆ ದೂರು ದಾಖಲಿಸಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ; ಬುಳ್ಳಾಪುರ, ಪಂಜೇನಹಳ್ಳಿ, ಹೆಬ್ಬಾಳ,ಆಲೂರು ಸರ್ವೆ ನಂಬರ್‌ಗಳಲ್ಲಿ ಕಲ್ಲುಗಣಿಗಾರಿಕೆ ನಡೆಯುತ್ತಿದ್ದು ಬಫರ್ ಝೋನ್, ಗಡಿನಾಶ, ಮಿನರಲ್ ಸಾಗಣಿ ನಿಯಮ ಉಲ್ಲಂಘನೆ ಸೇರಿದಂತೆ ವಿವಿಧ 36 ನ್ಯೂನ್ಯತೆಗಳನ್ನು ಉಲ್ಲೇಖಿಸಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು, ಬೆಸ್ಕಾಂ, ಸಾರಿಗೆ ಸೇರಿದಂತೆ ಕಂದಾಯ ಇಲಾಖೆ ಅಧಿಕಾರಿಗಳನ್ನು ಒಳಗೊಂಡ 18 ಅಧಿಕಾರಿಗಳ ಮೇಲೆ ದೂರು ದಾಖಲಿಸಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಭೇಟಿ ನೀಡಿದಾಗ ಸರಿಯಾಗಿ ಕಡತ ತೋರಿಸದ ಮತ್ತು ನಿರ್ವಹಣೆ ಮಾಡದ ಕಾರಣ 15 ವಿವಿಧ ನ್ಯೂನ್ಯತೆ ಪರಿಗಣಿಸಿ ಹಿರಿಯ ಭೂ ವಿಜ್ಞಾನಿ ಅಧಿಕಾರಿ ಮೇಲೆ ದೂರು ದಾಖಲಿಸಿಕೊಳ್ಳಲಾಗಿದೆ.

ಮಹಾನಗರ ಪಾಲಿಕೆ ಮೇಲೆ 2 ದೂರು; ಮಹಾನಗರ ಪಾಲಿಕೆ ಮೇಲೆ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಸಂಸ್ಕರಣೆ ಮತ್ತು ನಿರ್ವಹಣೆ ಲೋಪದೋಷ ಸೇರಿ 8 ನ್ಯೂನ್ಯತೆ, ಪಾಲಿಕೆಯಲ್ಲಿ ಹಾಜರಾತಿಯ ವ್ಯತ್ಯಾಸ, ಖಾಸಗಿ ವ್ಯಕ್ತಿಯಿಂದ ಕಡತ ನಿರ್ವಹಣೆ ಸೇರಿ 15 ವಿವಿಧ ನ್ಯೂನ್ಯತೆ




ಗಮನಿಸಿ ಮೊದಲ ದೂರು ಪಾಲಿಕೆಯ ಕಾರ್ಯಪಾಲಕ ಇಂಜಿನಿಯರ್ ಮತ್ತು ಇನ್ನೊಂದು ಉಪ ಆಯುಕ್ತರ ಮೇಲೆ ದೂರು ದಾಖಲಿಸಲಾಗಿದೆ.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ; ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಅಂಗಡಿಯವರು ಬಿಳಿಚೀಟಿ ಮೇಲೆ ಬಿಲ್ ಬರೆಯುವುದು ಮತ್ತು ರೈತರಿಂದ ಶೇ 3 ರಿಂದ 8 ರಷ್ಟು ಕಮೀಷನ್ ಪಡೆಯುವುದು, ಅಲ್ಲಿನ ಕಾರ್ಮಿಕರಿಗೆ ಸೌಲಭ್ಯಗಳನ್ನು ಕಲ್ಪಿಸದೇ ಇರುವುದು ಸೇರಿ 15 ನ್ಯೂನ್ಯತೆಗಳನ್ನು ಗಮನಿಸಿ ಎಪಿಎಂಸಿ ಕಾರ್ಯದರ್ಶಿಯ ಮೇಲೆ ಸ್ವಯಂ ಪ್ರೇರಿತ ದೂರು ದಾಖಲಿಸಲಾಗಿದೆ.

ಜಿಲ್ಲಾ ಆಸ್ಪತ್ರೆ ಮತ್ತು ಔಷಧ ಉಗ್ರಾಣ; ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿನಿತ್ಯ 1500 ಕ್ಕಿಂತಲೂ ಹೆಚ್ಚು ಹೊರರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದರೂ ಪ್ರಮುಖ ಪರೀಕ್ಷಾ ಸಾಧನಗಳಿಲ್ಲ, ಎಂಆರ್‌ಐ ಇಲ್ಲ, ಮಹಿಳೆಯರಿಗೆ ಪ್ರತ್ಯೇಕ ಸರತಿ ಸಾಲಿನ ವ್ಯವಸ್ಥೆ ಇಲ್ಲ, ಶವಗಾರದಲ್ಲಿ ಮರಣೋತ್ತರ ಪರೀಕ್ಷೆ ಮಾಡುವ ವೇಳೆ ತ್ಯಾಜ್ಯವನ್ನು ಚರಂಡಿಗೆ ನೇರವಾಗಿ ಬಿಡಲಾಗುತ್ತಿದೆ. ಶೌಚಾಲಯಗಳ ಸ್ವಚ್ಚತೆ ಇಲ್ಲ, ಆಹಾರದ ವಿತರಣೆಯಲ್ಲಿ ಗುಣಮಟ್ಟ ಕಾಪಾಡಿಕೊಳ್ಳುತ್ತಿಲ್ಲ ಎಂದು ವಿವಿಧ 20 ನ್ಯೂನ್ಯತೆಗಳನ್ನು ಗಮನಿಸಿ ಜಿಲ್ಲಾ ಸರ್ಜನ್ ಮೇಲೆ ದೂರು ದಾಖಲಿಸಲಾಗಿದೆ.

ಔಷಧ ಉಗ್ರಾಣದಲ್ಲಿ ಔಷಧ ನಾಶಪಡಿಸುವಾಗ ನಿಯಮಗಳನ್ನು ಪಾಲನೆ ಮಾಡುತ್ತಿಲ್ಲ, ಅವಧಿ ಮೀರಿದ ಔಷಧಿಗಳಿವೆ. ಸಿಬ್ಬಂದಿಗಳು ಗುರುತಿನ ಚೀಟಿ ಧರಿಸಿಲ್ಲ ಎಂಬಿತ್ಯಾದಿ 4 ನ್ಯೂನ್ಯತೆಗಳನ್ನು ಪರಿಗಣಿಸಿ ಹಿರಿಯ ಫಾರ್ಮಸಿ ಅಧಿಕಾರಿ ಮೇಲೆ ದೂರು ದಾಖಲಿಸಲಾಗಿದೆ.

ಬಾಬುಜಗಜೀವರ್ ರಾಂ ಭವನ; ಕೋಟ್ಯಾಂತರ ರೂ.ಗಳ ತೆರಿಗೆ ಹಣದಿಂದ ಬಾಬು ಜಗಜೀವನ್ ರಾಂ ಭವನ ನಿರ್ಮಾಣ ಮಾಡಿದ್ದರೂ ಇದರ ಉಪಯೋಗ ಮಾಡುವಲ್ಲಿ ಸಮಾಜ ಕಲ್ಯಾಣ ಇಲಾಖೆ ನಿರ್ಲಕ್ಷ್ಯತೆ ವಹಿಸಿದೆ. ಇದನ್ನು ಪರಿಗಣಿಸಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರ ಮೇಲೆ ದೂರು ದಾಖಲಿಸಲಾಗಿದೆ.

ಸಾರಿಗೆ ಕಚೇರಿ; ಸಾರಿಗೆ ಇಲಾಖೆಗೆ ಭೇಟಿ ನೀಡಿದ ವೇಳೆ ಎಫ್‌ಸಿ ಇಲ್ಲದ ವಾಹನಗಳು, ಮಿನರಲ್ ಸಾಗಣೆ ಮಾಡುವಾಗ ತಪಾಸಣೆ ಮಾಡಿದ ಬಗ್ಗೆ, ಶಾಲಾ ವಾಹನಗಳು ಸರ್ವೋಚ್ಚ ನ್ಯಾಯಾಲಯದ ಮಾರ್ಗಸೂಚಿ ಅಳವಡಿಕೆ, ಷರತ್ತುಗಳ ಪೂರೈಕೆ ಮಾಡಿದ ಮಾಹಿತಿ, ಖನಿಜ ಸಾಗಣೆ ವಾಹನಗಳ ಪರ್ಮಿಟ್ ನೀಡಿಕೆ, ಖನಿಜ ಸಾಗಣೆ ವಾಹನಗಳಿಗೆ ಎಂಡಿಪಿ ಮತ್ತು ಜಿಪಿಎಸ್ ಅಳವಡಿಕೆ, ಖಾಸಗಿ ವಾಹನಗಳ ಮೇಲೆ ಕಾನೂನಿನಲ್ಲಿ ಅವಕಾಶ ಇಲ್ಲದೇ ಇದ್ದರೂ ಅಧ್ಯಕ್ಷರು, ಕಾರ್ಯದರ್ಶಿ ಎಂದು ನಂಬರ್ ಪ್ಲೇಟ್ ಮೇಲೆ ಹೆಸರು ಅಳವಡಿಸಿದ ವಾಹನಗಳ ಮೇಲೆ ತೆಗೆದುಕೊಂಡ ಕ್ರಮದ ಮಾಹಿತಿ ಸೇರಿದಂತೆ ಸರಿಯಾದ ಮಾಹಿತಿ ನೀಡದ ಕಾರಣ 12 ನ್ಯೂನ್ಯತೆಗಳನ್ನು ಗುರುತಿಸಿ ಸಾರಿಗೆ ಅಧಿಕಾರಿಯವರ ಮೇಲೆ ದೂರು ದಾಖಲಿಸಲಾಗಿದೆ.

ಕಾರ್ಮಿಕ ಇಲಾಖೆ; ಕಾರ್ಮಿಕ ಇಲಾಖೆಯಲ್ಲಿ ಕಾರ್ಮಿಕರಿಗೆ ಇರುವ ಸೌಲಭ್ಯಗಳ ಸಮರ್ಪಕ ಮಾಹಿತಿ ಇಲ್ಲ, ಸಹಾಯಕ ಆಯುಕ್ತರಿಗೆ 16 ಅರ್ಜಿಗಳ ಆದೇಶಕ್ಕೆ ಇಟ್ಟಿದ್ದರೂ ಸಹ ಆದೇಶ ಮಾಡಿರುವುದಿಲ್ಲ. ನೊಂದಾಯಿತ ಅಂಗಡಿಗಳು ಹೆಚ್ಚಿದ್ದರೂ ಸಹ ಕೆಲವು ಮಾತ್ರ ತಪಾಸಣೆ ಮಾಡಲಾಗಿದೆ ಎಂಬ ನ್ಯೂನ್ಯತೆ ಸೇರಿದಂತೆ 9 ಅಂಶಗಳನ್ನು ಗಮನಿಸಿ ಕಾರ್ಮಿಕ ಇಲಾಖೆ ಸಹಾಯಕ ಕಾರ್ಮಿಕ ಆಯುಕ್ತರ ಮೇಲೆ ದೂರು ದಾಖಲಿಸಲಾಗಿದೆ.

ನೊಂದಣಿ ಇಲಾಖೆ; ದಾವಣಗೆರೆ ಉಪನೊಂದಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿದಾಗ ಕಚೇರಿಯಲ್ಲಿ ನಗದು ನಿರ್ವಹಣೆ ಸರಿಯಾಗಿ ಮಾಡಿರುವುದಿಲ್ಲ. ಸಿಬ್ಬಂದಿಗಳ ಹಾಜರಾತಿ ವಹಿಯಲ್ಲಿ ವೈಟ್ನರ್ ನಿಂದ ತಿದ್ದಲಾಗಿದೆ. ಹೊರಗುತ್ತಿಗೆ ಸಿಬ್ಬಂದಿ ವೇತನಕ್ಕಿಂತ ಹೆಚ್ಚು ಯುಪಿಐನಲ್ಲಿ ವಹಿವಾಟು ಮಾಡಿರುವುದು ಸೇರಿದಂತೆ 8 ಅಂಶಗಳನ್ನು ಉಲ್ಲೇಖಿಸಿ ಉಪನೊಂದಣಾಧಿಕಾರಿಗಳ ಮೇಲೆ ದೂರು ದಾಖಲಿಸಲಾಗಿದೆ.

ತಾಲ್ಲೂಕು ಕಚೇರಿ; ದಾವಣಗೆರೆ ತಾಲ್ಲೂಕು ಕಚೇರಿಗೆ ಭೇಟಿ ನೀಡಿದ್ದ ವೇಳೆ ಸಿಬ್ಬಂದಿಯವರು ಗೈರು ಹಾಜರಾಗಿದ್ದರೂ ಹಾಜರಾತಿವಹಿಯಲ್ಲಿ ಸಹಿಯನ್ನು ಮಾಡಿರುವುದಿಲ್ಲ ಮತ್ತು ರಜೆಯನ್ನು ದಾಖಲು ಮಾಡದೇ ಖಾಲಿ ಬಿಡಲಾಗಿತ್ತು. ವಿವಿಧ 4 ಅಂಶಗಳನ್ನು ಪರಿಗಣಿಸಿ ತಹಶೀಲ್ದಾರರ ಮೇಲೆ ಸ್ವಯಂಪ್ರೇರಿತ ದೂರು ದಾಖಲಿಸಲಾಗಿದೆ.

# ಜನನ, ಮರಣ ನೋಂದಣಿ ವಿಳಂಬಕ್ಕೆ ಆಸ್ಪದವಿಲ್ಲ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ

» **ದಾವಣಗೆರೆ**

ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ಯಾವುದೇ ಕಾರಣಕ್ಕೂ ವಿಳಂಬವಾಗಬಾರದು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದರು.

ಸೋಮವಾರ(ಮೇ.26) ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಜಿಲ್ಲಾ ಮಟ್ಟದ ನಾಗರೀಕ ನೋಂದಣಿ ಪದ್ದತಿಯ ಸಮನ್ವಯ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನ್ಯಾಯಾಲಯದ ಆದೇಶದಂತೆ ಜನನ, ಮರಣ ದಿನಾಂಕವು ನೋಂದಾಣಿಯಾಗಬೇಕು. ನ್ಯಾಮತಿಯಲ್ಲಿ ನೋಂದಾಣಿಗೆ ಶೀಘ್ರವೇ ಲಾಗಿನ್ ಸಮಸ್ಯೆಯನ್ನು ಸರಿಮಾಡಿಸಬೇಕು. ಸಾರ್ವಜನಿಕರು ಜನನ ದಿನಾಂಕವನ್ನು ತಿದ್ದುಪಡಿ ಮಾಡುವಂತೆ ಒತ್ತಾಯಿಸಬಾರದು. ಜನನ ಮರಣಗಳನ್ನು ನಿಗಧಿತ ದಿನಗಳ ಒಳಗಾಗಿ ಕಡ್ಡಾಯವಾಗಿ ಪ್ರಾಧಿಕಾರದ ಮುಂದೆ ಪ್ರತಿಯೊಬ್ಬರೂ ನೋಂದಾಯಿಸಬೇಕು ಎಂದರು.

2024 ರ ಸಾಲಿನ ಜನವರಿಯಿಂದ ಡಿಸೆಂಬರ್ ಮಾಹೆಯವರೆಗೆ ಜನನ ಅಂಕಿ ಅಂಶದಲ್ಲಿ 14703 ಗಂಡು, 13847 ಹೆಣ್ಣು ಸೇರಿ 28550 ಜನನ ಪ್ರಕರಣಗಳಿವೆ. ಮರಣ ಪ್ರಕರಣಗಳಲ್ಲಿ ಇದೇ ಅವಧಿಯಲ್ಲಿ 9902 ಗಂಡು, 7361,



ಹೆಣ್ಣು, 1 ತೃತೀಯ ಲಿಂಗ ಸೇರಿ 17264 ಮರಣ ಪ್ರಕರಣಗಳು ಜಿಲ್ಲೆಯಲ್ಲಿ ಜರುಗಿದೆ.

ಪ್ರಸಕ್ತ 2025 ರ ಸಾಲಿನ ಜನವರಿಯಿಂದ ಏಪ್ರಿಲ್ ವರೆಗೆ ಜನನ ಅಂಕಿ ಅಂಶದಲ್ಲಿ 4593 ಗಂಡು, 4439 ಹೆಣ್ಣು ಸೇರಿ 9032 ಜನನ ಪ್ರಕರಣಗಳಿವೆ. ಮರಣ ಪ್ರಕರಣಗಳಲ್ಲಿ ಇದೇ ಅವಧಿಯಲ್ಲಿ 3313 ಗಂಡು, 2599 ಹೆಣ್ಣು ಸೇರಿ 5912 ಮರಣ ಪ್ರಕರಣಗಳು ಜಿಲ್ಲೆಯಲ್ಲಿ ಜರುಗಿದೆ.

ಜನನ ಹಾಗೂ ಮರಣಗಳ ಅಂಕಿ ಅಂಶಗಳನ್ನು ಇ-ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಲಾಗಿದ್ದು ಗ್ರಾಮೀಣ ಪ್ರದೇಶದಲ್ಲಿ ಗ್ರಾಮಲೆಕ್ಕಿಗರು, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಜನನ, ಮರಣ ನೊಂದಣಿ ಪ್ರಾಧಿಕಾರವಾಗಿದ್ದು ನಗರ, ಪಟ್ಟಣ ಪ್ರದೇಶದಲ್ಲಿ ಮುಖ್ಯಾಧಿಕಾರಿ, ಆಯುಕ್ತರು ಪ್ರಾಧಿಕಾರವಾಗಿರುತ್ತಾರೆ.

ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ 916 ನೊಂದಣಿ ಘಟಕಗಳು, ನಗರ ಪ್ರದೇಶದಲ್ಲಿ 20 ಸೇರಿದಂತೆ ಒಟ್ಟು 936 ನೊಂದಣಿ ಘಟಕಗಳಿರುತ್ತವೆ.

ಜಿಲ್ಲಾ ಸಾಂಖ್ಯಿಕ ಅಧಿಕಾರಿ ನೀಲಾ, ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್, ತೋಟಗಾರಿಕೆ ಉಪನಿರ್ದೇಶಕ ರಾಘವೇಂದ್ರ ಪ್ರಸಾದ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ, ಜಿಲ್ಲಾ ಸರ್ಜನ್ ಡಾ; ನಾಗೇಂದ್ರಪ್ಪ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

## 6 ಕೋಟಿ ಮೊತ್ತದ ಆಯ್ದ ಭಾಗಗಳ ಅಭಿವೃದ್ಧಿ ಮತ್ತು ಡಾಂಬರೀಕರಣ ಕಾಮಗಾರಿ

# ವಿವಿಧ ಕಾಮಗಾರಿಗೆ ಶಾಸಕರಿಂದ ಭೂಮಿ ಪೂಜೆ

» **ಹೊಸದುರ್ಗ**

ತಾಲ್ಲೂಕಿನ ವಿವಿಧ ಕಾಮಗಾರಿಗಳಿಗೆ ಶಾಸಕ ಬಿ.ಜಿ.ಗೋವಿಂದಪ್ಪ ಭೂಮಿ ಪೂಜೆ ಕಾರ್ಯಕ್ರಮವನ್ನ ನೆರವೇರಿಸಿದರು.

ತಾಲೂಕಿನ ಅತ್ತಿಮಗೆ ಹಾಗು ಮಾಡದಕೆರೆ ಗ್ರಾಮ ಪಂಚಾಯತಿ ವ್ಯಾಪ್ತಿಯ ವಿವಿಧ ಗ್ರಾಮಗಳಾದ ಅತ್ತಿಮಗ್ಗೆ ಗ್ರಾ.ಪಂ ಅತ್ತಿಮಗ್ಗೆ ಗ್ರಾಮದ ಶಂಕ್ರಮ್ಮನ ಮನೆಯಿಂದ ಸ.ಕಿ.ಪ್ರಾ ಶಾಲೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ 15.00 ಲಕ್ಷಗಳು, ಹನುಮಂತಣ್ಣನ ಮನೆಯಿಂದ ಮುಖ್ಯರಸ್ತೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ 10.00 ಲಕ್ಷಗಳು, ಮಾಡದಕೆರೆ ಗ್ರಾ.ಪಂ ಹೊಸದುರ್ಗ ಹಿರಿಯೂರು ಮುಖ್ಯರಸ್ತೆಯಿಂದ ರೈತ ಸಂಪರ್ಕ ಕೇಂದ್ರ ಮಾಡದಕೆರೆ ಕಛೇರಿಯವರೆಗೆ ಸಿ.ಸಿ ರಸ್ತೆ ನಿರ್ಮಾಣ 15.00 ಲಕ್ಷಗಳು

ಅತ್ತಿಮಗ್ಗೆ ಗ್ರಾ.ಪಂ ಭಂಟನಗವಿ ಎ.ಕೆ ಕಾಲೋನಿ ಅಂಗನವಾಡಿ ಕೇಂದ್ರ ನೂತನ ಕಟ್ಟಡ ನಿರ್ಮಾಣ 15.00 ಲಕ್ಷಗಳು. ಭಂಟನಗವಿ ಗ್ರಾಮದ ಅಂಗನವಾಡಿ ಕೇಂದ್ರ ನೂತನ ಕಟ್ಟಡ ನಿರ್ಮಾಣ 15.00 ಲಕ್ಷಗಳು, ಪಟ್ಟಣದ ಹೆಚ್.ಎ. ರಸ್ತೆಯಿಂದ ಹೊಸದುರ್ಗ ರೈಲ್ವೆ ಸ್ಟೇಷನ್ ರಸ್ತೆಯ



ಕಿ.ಮೀ.0.00 ರಿಂದ 4.50 ಕಿ.ಮೀವರೆಗೆ ಸುಮಾರು 6 ಕೋಟಿ ಮೊತ್ತದ ಆಯ್ದ ಭಾಗಗಳ ಅಭಿವೃದ್ಧಿ ಮತ್ತು ಡಾಂಬರೀಕರಣ ಕಾಮಗಾರಿಗೆ ಕೊಂಡಾಪುರ ಗೇಟ್ ಬಳಿ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಉಪಾಧ್ಯಕ್ಷರು ಸದಸ್ಯರುಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು,ಸ್ಥಳೀಯ ಮುಖಂಡರು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು

### ಶಿಕ್ಷಣ ಸಂಸ್ಕಾರದಿಂದ ವ್ಯಕ್ತಿತ್ವ ವಿಕಸನ-ಎಚ್.ಗಿರಿಜ



» **ಹೊಸದುರ್ಗ**

ಶಿಕ್ಷಣ ಸಂಸ್ಕಾರದಿಂದ ವ್ಯಕ್ತಿತ್ವ ವಿಕಸನವಾಗುತ್ತದೆ ಎಂದು ಚಿತ್ರದುರ್ಗ ಡಯಟ್‌ನ ಹಿರಿಯ ಉಪನ್ಯಾಸಕರಾದ ಎಚ್.ಗಿರಿಜ ಹೇಳಿದರು.

ಪಟ್ಟಣದ ಸರ್ಕಾರಿ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಡಿ.ಪಿ.ಎಸ್.ಇ ಕೋರ್ಸ್ (ಡಿಪ್ಲೊಮಾ ಇನ್ ಫ್ರೀ ಸ್ಕೂಲ್ ಎಜುಕೇಷನ್) ಪೂರ್ಣಗೊಳಿಸಿದ ಪ್ರಶಿಕ್ಷಣಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು ಪ್ರತಿಯೊಬ್ಬ ವ್ಯಕ್ತಿ ಸಮಾಜದಲ್ಲಿ ಉತ್ತಮ ಪ್ರಜೆಯಾಗಿ ಜೀವನ ನಡೆಸಲು ಶಿಕ್ಷಣ ದಾರಿದೀಪವಾಗಿದೆ. ಶಿಕ್ಷಕರು ಸಮಾಜದ ಕೀಲಿಕೈ ಇದ್ದಂತೆ. ಪ್ರಶಿಕ್ಷಣಾರ್ಥಿಗಳು ತಮ್ಮ ವೃತ್ತಿ ಜೀವನದಲ್ಲಿ ಉತ್ತಮ ಶಿಕ್ಷಕರಾಗಲು ನಿರಂತರ ಅಧ್ಯಯನಶೀಲರಾಗಬೇಕು. ತರಗತಿ ನಿರ್ವಹಣೆಯಲ್ಲಿ ಪೂರ್ವ ಸಿದ್ಧತೆ ಮಾಡಿಕೊಂಡು ಬೋಧನೆ ಮಾಡಬೇಕು. ಸಮರ್ಪಣಾಭಾವದಿಂದ ಕೆಲಸ ನಿರ್ವಹಿಸುವುದರ ಮೂಲಕ ಮಕ್ಕಳಲ್ಲಿ ಮೌಲ್ಯಪ್ರಜ್ಞೆ ಬೆಳೆಸಬೇಕು ಎಂದರು. ಪ್ರಭಾರೆ ಪ್ರಾಂಶುಪಾಲ ಎನ್.ರಾಮಚಂದ್ರಪ್ಪ ಮಾತನಾಡಿ, ಪೂರ್ವ ಪ್ರಾಥಮಿಕ ತರಗತಿಗೆ (ಎಲ್.ಕೆ.ಜಿ/ಯು.ಕೆ.ಜಿ) ಬೋಧಿಸಲು ಡಿಪಿಎಸ್ಇ ಕೋರ್ಸ್ ಪೂರಕವಾಗಿದೆ. ಹೊಸದುರ್ಗ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ 2 ವರ್ಷ ಅವಧಿಯ ಈ ಕೋರ್ಸ್ ನಡೆಯುತ್ತಿದ್ದು ತರಬೇತಿ ಪಡೆದವರು ಪೂರ್ವ ಪ್ರಾಥಮಿಕ ತರಗತಿಗೆ ಬೋಧಿಸಲು ಅರ್ಹತೆ ಪಡೆಯುತ್ತಾರೆ ಎಂದರು. ಡಯಟ್ ಉಪನ್ಯಾಸಕ ಎಸ್.ಬಸವರಾಜು, ಶಿಕ್ಷಕರ ತರಬೇತಿ ಸಂಸ್ಥೆಯ ಉಪನ್ಯಾಸಕರಾದ ಬಿ.ಆರ್.ಶಶಿಧರ, ಕಚೇರಿ ಸಿಬ್ಬಂದಿ ಎಂ.ಕೆ. ಜಗದೀಶ್, ಕುಮಾರ್, ಗಣೇಶ್ ಮತ್ತು ಪ್ರಶಿಕ್ಷಣಾರ್ಥಿಗಳು ಇದ್ದರು.

### ವಿದ್ಯಾವಂತ ಮಹಿಳೆಯರಿಗೆ ಸನ್ಮಾನ



**ಹೊಸದುರ್ಗ:** ತಾಲೂಕಿನ ಆನಿವಾಳ ಗ್ರಾಮದಲ್ಲಿ ಎಸ್.ವಿ.ನಾಗರಾಜ್ ನೇತೃತ್ವದಲ್ಲಿ ನಡೆದ ತಾಯಂದಿರ ದಿನ, ವಿದ್ಯಾವಂತ ಮಹಿಳೆಯರಿಗೆ ಸನ್ಮಾನ ಸಮಾರಂಭವನ್ನು ಶಿಕ್ಷಣಜ್ಞಾನ ಪತ್ರಿಕೆ ಗ್ರಾಮ ಪಂಚಾಯಿತಿ ಆನಿವಾಳ ಅಂಗನವಾಡಿ ಕೇಂದ್ರ ಮತ್ತು ನಮ್ಮ ಊರು ನಮ್ಮ ಜನ ಬಳಗದಿಂದ ಹಮ್ಮಿಕೊಳ್ಳಲಾಯಿತು. ಉದ್ಘಾಟನೆಯನ್ನು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ ವಿಶ್ವನಾಥ್ ನೆರವೇರಿಸಿದರು, ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಯಕ್ಕೆ ಅಧ್ಯಕ್ಷತೆ ವಹಿಸಿದ್ದರು. ಗುರುಮಾತೆ ವನಿತಾ ರಾಜು ಮಹಿಳೆಯರ ಕುರಿತಂತೆ ವಿಶೇಷ ಉಪನ್ಯಾಸ ನೀಡಿದರು. ಮುಖ್ಯ ಅತಿಥಿಗಳಾಗಿ ಉಪಾಧ್ಯಕ್ಷ ಮಂಜಮ್ಮ, ಪಿಡಿಓ ಜೆ.ಮಂಜುನಾಥ್ ಕಲಾವಿದ ಅಪೇಕ್ಷಾ ಮಂಜುನಾಥ್, ಗ್ರಾಮ ಪಂಚಾಯತಿ ಸದಸ್ಯೆ ಲತಾ, ಪತ್ರಕರ್ತ ಎಸ್. ವಿ ನಾಗರಾಜ್ ಸೇರಿದಂತೆ ಗ್ರಾಮದ ಮುಖಂಡರುಗಳು ಸುತ್ತ ಮುತ್ತಲಿನ ಗ್ರಾಮದವರು ಪಾಲ್ಗೊಂಡಿದ್ದರು, ಕಾರ್ಯಕ್ರಮದಲ್ಲಿ ಕೆಲವು ತಾಯಂದಿರುಗಳಿಗೆ ಹಾಗೂ ಸ್ನಾತಕೋತ್ತರ ಪದವಿಯಿಂದ ನರ್ಸಿಂಗ್ ವರೆಗೆ ವ್ಯಾಸಂಗವನ್ನು ಮಾಡಿದ ಮಹಿಳೆಯರಿಗೆ ಗೌರವಿಸಿ ಸನ್ಮಾನಿಸಲಾಯಿತು.

## ಫಾಸ್ಟ್ ನ್ಯೂಸ್

### ಪಿ.ಸಿ.ಎಂ.ಬಿ ವಿಷಯಗಳಿಗೆ ದಾಖಲಾತಿಗೆ ಅರ್ಜಿ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರಸಕ್ತ ಸಾಲಿಗೆ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜು ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜು ಹಾಗೂ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿ.ಯು.ಸಿ ಪಿ.ಸಿ.ಎಂ.ಬಿ(ವಿಜ್ಞಾನ ವಿಭಾಗ) ವಿಷಯಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಈ ವಸತಿ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿ, ಸಮವಸ್ತ್ರ, ಪಠ್ಯಪುಸ್ತಕ ಹಾಗೂ ಇನ್ನಿತರೆ ಸಾಮಗ್ರಿಗಳನ್ನು ನೀಡುವುದರ ಜೊತೆಗೆ ಉತ್ತಮವಾದ ವಿದ್ಯಾಭ್ಯಾಸ ನೀಡಲಾಗುವುದು. ಈ ಕಾಲೇಜುಗಳಲ್ಲಿ ಅಲ್ಪಸಂಖ್ಯಾತ ವರ್ಗದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ,ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75% ರಷ್ಟು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಶೇ.25%ರಷ್ಟು ಪ್ರವೇಶ ಲಭ್ಯವಿದೆ. ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ದಾಖಲಾತಿಗಾಗಿ ಪೋಷಕರ ಆದಾಯ ಮಿತಿ ರೂ.2.50 ಲಕ್ಷಗಳಿಗೆ ಮೀರಬಾರದು. ಅಭ್ಯರ್ಥಿಗಳು ಮೇ.31 ರೊಳಗಾಗಿ ಸೇವಾ ಸಿಂಧು ಪೋರ್ಟಲ್ ್ಣಣಠಿ://ಜತಭಿಟಿಜುಣ , ಜಡಿತುಥಿಜ. ಇಚಿಡಿಟಿಚಿಣಚಿಞಚಿ.ರಠತ.ಟಿ ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ದಾವಣಗೆರೆ ದೂರವಾಣಿ ಸಂ:08192–250022, ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜು, ಕೊಂಡಜ್ಜಿ, ಹರಿಹರ ತಾ॥ ಮೊ:9008815296, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಶಾಲೆ, ಹೊಸ ಕುಂದುವಾಡ ಗ್ರಾಮ, ಎನ್.ಹೆಚ್–13 ರಸ್ತೆ, ದಾವಣಗೆರೆ. ಮೊ:9916828601, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜು ಕೆರೆಬಿಳಚಿ, ಚನ್ನಗಿರಿ ತಾ॥ ಮೊ:9483075634, ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜು ಬೀಡಿ ಲೇಔಟ್, ದಾವಣಗೆರೆ. ಮೊ:7022234663 ಸಂಪರ್ಕಿಸಲು ಇಲಾಖೆಯ ಅಧಿಕಾರಿ ಭಕ್ತ ಮಾರ್ಕಂಡೇಯ ತಿಳಿಸಿದ್ದಾರೆ.

### ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರ ನೇಮಕಾತಿಗೆ ಅರ್ಜಿ

» **ದಾವಣಗೆರೆ**

ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕಗಳ ಸಮರ್ಪಕ ವಸೂಲಾತಿಗಾಗಿ ಡೇ–ನಲ್ಮ್ ಅಭಿಯಾನದಡಿ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ರಚಿಸಲಾಗಿರುವ ಅರ್ಹ ಮಹಿಳಾ ಸ್ವ–ಸಹಾಯ ಸಂಘಗಳನ್ನು ತೊಡಗಿಸಿಕೊಂಡು ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕವನ್ನು ವಸೂಲಾತಿ, ಸಂಗ್ರಹಣೆ ಮಾಡಲು ಮಹಿಳಾ ಸ್ವ–ಸಹಾಯ ಗುಂಪುಗಳ ಸದಸ್ಯರ ನೇಮಕಾತಿಗಾಗಿ ಆಸಕ್ತಿಯುಳ್ಳ ಸದಸ್ಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನೀರಿನ ಬಳಕೆಯ ಶುಲ್ಕದ ಹಿಂದಿನ ಬಾಕಿ ಮೊತ್ತ ಬಡ್ಡಿ ಸಹಿತವಾಗಿ ಮತ್ತು ಪ್ರಸ್ತುತ ವಾರ್ಷಿಕ ಬೇಡಿಕೆಯ ಸಹಿತ ವಸೂಲಿ ಮಾಡುವುದು ಹಾಗೂ ಬಹುದಿನಗಳಿಂದ ಬಾಕಿ ಇರುವ ಆಸ್ತಿ ತೆರಿಗೆಯನ್ನು ಸಮರ್ಪಕವಾಗಿ ವಸೂಲಿ ಮಾಡಲು ಸ್ಥಳೀಯ ಮಹಿಳಾ ಸ್ವಸಹಾಯ ಗುಂಪುಗಳ ಸೇವೆಯನ್ನು ಪಡೆಯಲು ಮತ್ತು ಮಹಿಳಾ ಸ್ವಸಹಾಯ ಗುಂಪುಗಳಿಗೆ ವಸೂಲಾದ ಮೊತ್ತದಲ್ಲಿ ಶೇಕಡ 5ರಷ್ಟನ್ನು ಪ್ರೋತ್ಸಾಹಧನದ ರೂಪದಲ್ಲಿ ನೀಡಲು ಸರ್ಕಾರದಿಂದ ಆದೇಶಿಸಲಾಗಿರುತ್ತದೆ. ಆಸಕ್ತ ಮಹಿಳಾ ಸ್ವ–ಸಹಾಯ ಗುಂಪುಗಳ ಸದಸ್ಯರುಗಳು ತಮ್ಮ ವೈಯಕ್ತಿಕ ವಿವರಗಳನ್ನು ಡೇ–ನಲ್ಮ್ ಹಿಂಬರಹದೊಂದಿಗೆ www.davanagerecity.mrc.gov.in ವೆಬ್‌ಸೈಟ್‌ನಲ್ಲಿ ನಿಗದಿತ ನಮೂನೆಯಲ್ಲಿ ಜೂನ್ 20 ಒಳಗಾಗಿ ಸಲ್ಲಿಸಬೇಕು ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

### ಮೀನುಗಾರರಿಗೆ ಶೀಘ್ರದಲ್ಲೇ ವಸತಿ ಸೌಲಭ್ಯ

» **ಚಳ್ಳಕೆರೆ**

ಮೀನುಗಾರಿಕೆ ಇಲಾಖೆ ಪ್ರತಿವರ್ಷದಂತೆ ಈ ವರ್ಷವೂ ಮೀನುಗಾರರಿಗೆ ಇಲಾಖೆವತಿಯಿಂದ ವಸತಿಗಳನ್ನು ನೀಡಲು ಸಿದ್ದತೆ ನಡೆಸಿದ್ದು, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಮಾರ್ಗದರ್ಶನದಲ್ಲಿ ಈ ಭಾಗದ ಮೀನುಗಾರರಿಗೆ ಇಲಾಖೆಯ ನಿರ್ದೇಶನದಂತೆ ವಸತಿಗಳನ್ನು ನೀಡಲಾಗುವುದು ಎಂದುಮೀನುಗಾರಿಕೆ ಇಲಾಖೆ ಜಿಲ್ಲಾ ಉಪನಿರ್ದೇಶಕ ಕುಮಾರ್ ತಿಳಿಸಿದರು. ಅವರು, ತಾಲ್ಲೂಕಿನ ನಗರಂಗೆರೆ ಗ್ರಾಮ ಮೀನುಗಾರರ ಸಹಕಾರಿ ಸಂಘದ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ತಾಲ್ಲೂಕಿನ ವಿವಿಧ ಗ್ರಾಮಗಳ ಕೆರೆಗಳಲ್ಲಿ ಇಲಾಖೆಯಿಂದ ಬರುವ ಜೂನ್ ತಿಂಗಳಿನಿಂದ ಮೀನಿನ ಮರಿಗಳನ್ನು ಟೆಂಡರ್ ಮೂಲಕ ವಿತರಣೆ ಮಾಡಲು ಯೋಜನೆ ರೂಪಿಸಿದೆ ಎಂದರು. ಎಲ್ಲರನ್ನೂ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ನಗರಂಗೆರೆ ಮೀನುಗಾರರ ಸಹಕಾರ ಸಂಘದ ಅಧ್ಯಕ್ಷ, ಕೃಷಿ ಪತ್ತಿನ ಸಹಕಾರಿ ಸಂಘದ ಮಾಜಿ ಅಧ್ಯಕ್ಷ ಸಿ.ಓಬಯ್ಯ, ಮೀನುಗಾರಿಕೆ ಇಲಾಖೆ ವಸತಿಗಳನ್ನು ಮೀನುಗಾರರಿಗೆ ವಿತರಣೆ ಮಾಡಲು ಯೋಜನೆ ಹಾಕಿಕೊಂಡಿರುವುದು ಸಂತಸ ವಿಷಯ ಎಂದರು.




# ಲೈಕ್, ಶೇರ್, ಕಾಮೆಂಟ್

## ಯಾರಿಗೆ, ಯಾವುದಕ್ಕೆ ಎಷ್ಟು.......

ಸಿನಿಮಾ ನಟಿಯೊಬ್ಬರ ಒಂದು ನಗುಮುಖದಭಾವಚಿತ್ರಕ್ಕೆಫೇಸ್ಬುಕ್, ಯೂಟ್ಯೂಬ್, ಇನ್ಸ್ಟಾಗ್ರಾಮ್, ಎಕ್ಸ್ ಮುಂತಾದ ಸಾಮಾಜಿಕ ಜಾಲತಾಣದ ಲೈಕ್ ಕಾಮೆಂಟ್ ಮತ್ತು ಶೇರ್ ಸಾಮಾನ್ಯವಾಗಿ ಸಾವಿರದಿಂದ ಪ್ರಾರಂಭವಾಗಿ ಲಕ್ಷ, ಕೆಲವೊಮ್ಮೆ ಮಿಲಿಯನ್ ಸಹ ದಾಟುತ್ತದೆ. ಕಿರುತೆರೆಯ ನಿರೂಪಕಿಯೊಬ್ಬರ ಇದೇ ರೀತಿಯ ಭಾವಚಿತ್ರಕ್ಕೆ, ಲಕ್ಷಗಟ್ಟಲೆ ಲೈಕ್ ಒತ್ತಲಾಗುತ್ತದೆ. ಗಿಚ್ಚಿ ಗಿಲಿ ಗಿಲಿ ಅಥವಾ ಕಾಮಿಡಿ ಕಿಲಾಡಿಗಳು ಅಥವಾ ಮಜಾಭಾರತ ಕಾರ್ಯಕ್ರಮದ ನಟ ನಟಿಯರ ಹಾಸ್ಯಕ್ಕೆ ಸಾವಿರ – ಲಕ್ಷಗಳ ಕಾಮೆಂಟ್ ಇರುತ್ತದೆ. ಇನ್ನೂ ಅನೇಕ ಹಾಸ್ಯ ಕಲಾವಿದರ ವಿಡಿಯೋಗಳಿಗೆ ಲಕ್ಷ ಲಕ್ಷ ವೀಕ್ಷಕರು ಇರುತ್ತಾರೆ. ಈ ಮನರಂಜನಾ ಉದ್ಯಮದ ಯಾರೇ ಆಗಿರಲಿ, ಅವರ ನಗು, ಅವರ ಮನೆ, ಅವರ ನಾಯಿ, ಅವರ ಕಾರು, ಅವರ ತೋಟ, ಅವರ ಪ್ರವಾಸ ಇವುಗಳ ಮಾಹಿತಿ ತಿಳಿದುಕೊಳ್ಳಲು ಸಾಮಾನ್ಯ ಜನ ಹಾತೊರೆಯುತ್ತಾರೆ. ಲೈಕ್, ಕಾಮೆಂಟ್ ಮತ್ತು ಶೇರ್ ಮಾಡುತ್ತಾರೆ.......

ಹಾಗೆಯೇ ಚಿತ್ರ ವಿಚಿತ್ರ ನಡವಳಿಕೆಯ ಅನೇಕರು ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಜನಪ್ರಿಯತೆ ಪಡೆಯುತ್ತಿದ್ದಾರೆ. ಅವರ ಖಾಸಗಿ ವಿಷಯಗಳು ಸಹ ಜನರ ಆಕರ್ಷಣೆಗೆ ಒಳಗಾಗಿದೆ. ಸಂತೋಷ, ಆ ಸ್ವಾತಂತ್ರ್ಯ ಅವರಿಗೂ ಇದೆ, ಜನರಿಗೂ ಇದೆ......

ಆದರೆ ಅದೇ ಸಮಯದಲ್ಲಿ ಗೌತಮ ಬುದ್ಧರ ಭಾವಚಿತ್ರ ಮತ್ತು ಸಂದೇಶಕ್ಕೆ ನೂರರೊಳಗಿನ ಕಾಮೆಂಟ್, ಶೇರ್, ಲೈಕ್ ಸಿಗುತ್ತದೆ. ಚಾಣಕ್ಯನ ನೀತಿ ಶಾಸ್ತ್ರಕ್ಕೆ, ಬಸವಣ್ಣನವರ ವಚನಗಳಿಗೆ, ಸ್ವಾಮಿ ವಿವೇಕಾನಂದರ ಚಿಂತನೆಗೆ, ಭಕ್ತ ಕಬೀರರ ಹಾಡುಗಳಿಗೆ, ಮೀರಾಬಾಯಿ ಅವರ ಭಜನೆಗಳಿಗೆ, ಮಹಾತ್ಮ ಗಾಂಧಿಯವರ ಜೀವನ ದೃಷ್ಟಿಕೋನಕ್ಕೆ, ಬಾಬಾ ಸಾಹೇಬರ ವಿಚಾರಗಳಿಗೆ, ಸಾಮಾನ್ಯವಾಗಿ ಹತ್ತರಿಂದ ನೂರರ ಒಳಗಿನ ಲೈಕ್ ಕಾಮೆಂಟ್ ಮತ್ತು ಶೇರ್ ಇರುತ್ತದೆ. ಇರಲಿ, ಇದು ಸಹ ಅವರವರ ಸ್ವಾತಂತ್ರ್ಯ, ಅಭಿರುಚಿ, ಯೋಗ್ಯತೆ ಎಂದು




ಭಾವಿಸೋಣ.......

ಇದೇ ಸಮಯದಲ್ಲಿ ಹುಬ್ಬಳ್ಳಿಯಲ್ಲಿ ಇನ್ನಷ್ಟು ಹೆಚ್ಚು ಪೊಲೀಸ್ ಠಾಣೆಗಳು ತೆರೆಯಬೇಕೆಂದು ಪ್ರತಿಭಟನೆ ನಡೆಯುತ್ತದೆ. ಮೊನ್ನೆ ಬೆಂಗಳೂರಿನ ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಕಿಕ್ಕಿರಿದು ಜನ ತಪಾಸಣೆಗಾಗಿ ಸೇರಿದ್ದರು ಎಂದು ಗೆಳೆಯರು ವಿಡಿಯೋ ಶೇರ್ ಮಾಡಿದ್ದರು. ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಬೆಳಗಿನಿಂದ ಸಂಜೆಯವರೆಗೂ ಸರತಿಯ ಸಾಲು ಕರಗಿರಲೇ ಇಲ್ಲ. ಅನೇಕ ಕೋರ್ಟುಗಳಲ್ಲಿ ನಿಲ್ಲಲು ಜಾಗವಿಲ್ಲದಷ್ಟು ಕಕ್ಷಿದಾರರು ತುಂಬಿರುತ್ತಾರೆ. ಪತ್ರಿಕೆಗಳಲ್ಲಿ ಕ್ರೈಂ ಸುದ್ದಿಗಾಗಿ ಇತರ ಅನೇಕ ಪ್ರಮುಖ ವಿಷಯಗಳನ್ನು ಪಕ್ಕಕ್ಕೆ ಸೇರಿಸಿ ಇವುಗಳನ್ನೇ ವಿಜೃಂಭಿಸಲಾಗುತ್ತಿದೆ. ಟಿವಿ ಗಳಲ್ಲಿ ಬ್ರೇಕಿಂಗ್ ನ್ಯೂಸ್ ನ ಬಹುತೇಕ ವಿಷಯಗಳು ಸಮಾಜದ ಅತ್ಯಂತ ನೀಚ ವಿಷಯಗಳಿಗೆ ಸಂಬಂಧಿಸಿದಂತೆ ಇರುತ್ತದೆ. ನಮ್ಮ ಮಕ್ಕಳ ಬಹುತೇಕ ಚಟುವಟಿಕೆಗಳು ಮೊಬೈಲಿನ ವಿಡಿಯೋ ಗೇಮ್ಗಳಲ್ಲೇ ಕಳೆದುಹೋಗುತ್ತಿದೆ ಎಂದು ಎಲ್ಲಾ ಪೋಷಕರು ಪ್ರತಿನಿತ್ಯ ಗೊಣಗುತ್ತಾರೆ. ಕೊಲೆಗಳು, ಆತ್ಮಹತ್ಯೆಗಳು ಸಹಜವಾಗುತ್ತಿವೆ. ಇತ್ತೀಚಿನ ಬೇಸಿಗೆಯಲ್ಲಿ ತಾಪಮಾನ ಸಾಕಷ್ಟು ತೊಂದರೆ ನೀಡಿತು.......

ಒಟ್ಟಾರೆ ನಮ್ಮ ವ್ಯವಸ್ಥೆ ಮತ್ತು ಜನರ ಮನೋಭಾವ ಎತ್ತ ಸಾಗುತ್ತಿದೆ ಎಂದು ಆಶ್ಚರ್ಯವಾಗುತ್ತದೆ. ಒಳ್ಳೆಯದನ್ನು ಕೇವಲ ಉದಾಹರಣೆಯಾಗಿ ಸ್ಮರಿಸಿಕೊಳ್ಳುತ್ತಾರೆ. ಆದರೆ ತಮ್ಮ ನಡವಳಿಕೆ ಮಾತ್ರ ಅದಕ್ಕೆ ಸಂಪೂರ್ಣ ವಿರುದ್ಧವಾಗಿರುತ್ತದೆ. ನಮ್ಮ ಮಕ್ಕಳು ಒಳ್ಳೆಯವರಾಗಿರಬೇಕು, ಒಳ್ಳೆಯ ಗುಣ ನಡತೆ ಸ್ವಭಾವ ಹೊಂದಿರಬೇಕು, ಒಳ್ಳೆಯ ಸಂಸ್ಕಾರ ಪಡೆಯಬೇಕು, ಒಳ್ಳೆಯ ಸಾಧನೆ ಮಾಡಬೇಕು ಮುಂತಾದಅನೇಕಕನಸುಗಳನ್ನು,ಆಶಯಗಳನ್ನು ಹೊಂದಿರುತ್ತಾರೆ. ಆದರೆ ಅದಕ್ಕೆ ಇಡೀ ಸಮಾಜ ಸಹ ಮೌಲ್ಯಯುತವಾಗಿ ನಡೆಯುತ್ತಿರಬೇಕು, ಮೌಲ್ಯಗಳು ಅಳವಡಿಕೆಯಾಗಿರಬೇಕು, ಅದಕ್ಕಾಗಿ ಮೌಲ್ಯಯುತ ಆದರ್ಶಗಳನ್ನು ಸಮಾಜದಲ್ಲಿ ನೆಲೆ ನಿಲ್ಲುವಂತೆ ಮಾಡಬೇಕು ಎನ್ನುವ ಮನೋಭಾವವೇ ಇಲ್ಲವಾಗಿದೆ.....

ಒಳ್ಳೆಯ ಬೀಜ ಬಿತ್ತದೇ, ಒಳ್ಳೆಯ ಫಸಲು ಹೇಗೆ ಸಾಧ್ಯ. ಬೇವು ಬಿತ್ತಿ ಮಾವು ಬೆಳೆಯಲು ಸಾಧ್ಯವೇ. ಇಷ್ಟು ಸರಳ ವಾಸ್ತವ ಸತ್ಯವನ್ನು ಅರಿಯಲಾರದಷ್ಟು ಅಥವಾ ಅರಿತರು ಅದನ್ನು ಪ್ರಾಯೋಗಿಕವಾಗಿ ಆಚರಣೆಗೆ ತರಲಾರದಷ್ಟು ನಾವು ಅಸಾಯಕರಾಗಿದ್ದೇವೆಯೇ ಅಥವಾ ಸ್ವಾರ್ಥಿಗಳಾಗಿದ್ದೇವೆಯೇ ಅಥವಾ ಮೂರ್ಖರಾಗಿದ್ದೇವೆಯೇ.....

ಮೈದಾನದ ಕ್ರೀಡಾ ಸಂಸ್ಕೃತಿಗೆ ಪರ್ಯಾಯವಾಗಿ ವಿಡಿಯೋ ಗೇಮ್ ಸಂಸ್ಕೃತಿ ಹುಟ್ಟು ಹಾಕಿ, ಗ್ರಂಥಾಲಯ ಸಂಸ್ಕೃತಿಗೆ ಪರ್ಯಾಯವಾಗಿ ಬಾರ್ ಸಂಸ್ಕೃತಿ ಹುಟ್ಟು ಹಾಕಿ, ಎಳನೀರು ಸಂಸ್ಕೃತಿಗೆ ಪರ್ಯಾಯವಾಗಿ ಪೆಪ್ಸಿ ಕೋಕ್ ಸಂಸ್ಕೃತಿ ಹುಟ್ಟು ಹಾಕಿ, ಶ್ರಮ ಸಂಸ್ಕೃತಿಗೆ ವಿರುದ್ಧವಾಗಿ ಮಜಾ ಸಂಸ್ಕೃತಿ ಹುಟ್ಟು ಹಾಕಿ, ಅರಿವಿನ ಸಂಸ್ಕೃತಿಗೆ ವಿರುದ್ಧವಾಗಿ ಹುಚ್ಚು ಮನರಂಜನಾ ಸಂಸ್ಕೃತಿ ಹುಟ್ಟುಹಾಕಿ, ಈಗ ಸಮಾಜ ಹಾಳಾಗುತ್ತಿದೆ, ನಮ್ಮ ಮಕ್ಕಳು ದಾರಿ ತಪ್ಪುತ್ತಿದ್ದಾರೆ, ಎಲ್ಲೆಲ್ಲೂ ಕೊಲೆ ಹಿಂಸೆ ಪೆನ್ ಡ್ರೈವ್ ಗಳದೇ ಸುದ್ದಿ ಎಂದು ಬಾಯಿ ಬಡಿದುಕೊಂಡರೆ ಹೇಗೆ.....

ಅದಕ್ಕಾಗಿಯೇ ಹೇಳುವುದು, ಒಂದು ಒಳ್ಳೆಯ ಸಂಸ್ಕೃತಿ, ಒಂದು ಒಳ್ಳೆಯ ವ್ಯಕ್ತಿತ್ವ ರೂಪಗೊಳ್ಳಬೇಕೆಂದರೆ, ಇಡೀ ವ್ಯವಸ್ಥೆ, ಆ ನಿಟ್ಟಿನಲ್ಲಿ ಮೌಲ್ಯಯುತವಾಗಿ ಉಳಿಯಬೇಕು, ಬೆಳೆಯಬೇಕು, ಬೆಳೆಸಬೇಕು. ಇಲ್ಲದಿದ್ದರೆ ಮಾಡಿದ್ದುಣ್ಣೋ ಮಹಾರಾಯ. ಯೋಚಿಸಿ ಮುಂದಿನ ದಿನಗಳಲ್ಲಿ ಆ ನಿಟ್ಟಿನಲ್ಲಿ ಈಗಿನಿಂದಲೇ ಕಾರ್ಯ ಪ್ರವೃತ್ತರಾಗಿ. ಮುಂದಿನ 15/20 ವರ್ಷಗಳಲ್ಲಿ ಒಳ್ಳೆಯ ಮೌಲ್ಯಯುತ ಸಮಾಜ ನಮ್ಮದಾಗುತ್ತದೆ. ಧನ್ಯವಾದಗಳು.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

# ಪಾಠದ ಜೊತೆಗೆ ಆಟದ ಕಡೆಗೂ ಹೆಚ್ಚಿನ ಗಮನ ಕೊಡಿ

» **ಹೊಳಲ್ಕೆರೆ**

ಪಾಠದ ಜೊತೆಗೆ ಆಟದ ಕಡೆಗೂ ಹೆಚ್ಚಿನ ಗಮನ ಕೊಟ್ಟಾಗ ಮಾತ್ರ ಆರೋಗ್ಯವನ್ನು ಸದೃಢವಾಗಿಟ್ಟುಕೊಳ್ಳಲು ಸಾಧ್ಯ ಎಂದು ಶಾಸಕ ಡಾ.ಎಂ.ಚಂದ್ರಪ್ಪ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಒಂದು ಕೋಟಿ ರೂ. ವೆಚ್ಚದಲ್ಲಿ ನೂತನ ಗ್ರಂಥಾಲಯ ಕಟ್ಟಡ ನಿರ್ಮಾಣ ಹಾಗೂ ಇಪ್ಪತ್ತು ಲಕ್ಷ ರೂ. ವೆಚ್ಚದ ಕುಡಿಯುವ ನೀರು ಘಟಕದ ನಿರ್ಮಾಣ ಕಾಮಗಾರಿಗೆ ಸೋಮವಾರ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.

ಡಿಗ್ರಿಕಾಲೇಜುಕಟ್ಟಿಸಿದ್ದರಿಂದಶೇ.80ರಷ್ಟು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಿದೆ. ಹತ್ತು ಕೋಟಿ ರೂ.ವೆಚ್ಚದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣವಾಗಿದೆ. ಇನ್ನು ಹದಿನೆಂಟು ಕೋಟಿ ರೂ. ಗಳನ್ನು ಖರ್ಚು ಮಾಡಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು. ಕಾಲೇಜು ಸಮೀಪ ನೂರು ಎಕರೆ ಜಮೀನು ಮೀಸಲಿಟ್ಟಿದ್ದು, ಸ್ನಾತಕೋತ್ತರ ಕೇಂದ್ರ ಆರಂಭಿಸಲಾಗುವುದು. ಇದರಿಂದ ಪದವಿಯ ನಂತರ ಬೇರೆ ಊರುಗಳಿಗೆ ಹೋಗಿ ಸ್ನಾತಕೋತ್ತರ ಶಿಕ್ಷಣ ಪಡೆಯವುದು ತಪ್ಪಿದಂತಾಗುತ್ತದೆ ಎಂದು ಹೇಳಿದರು.



ಪ್ರಥಮ ಬಾರಿಗೆ ಭರಮಸಾಗರದಲ್ಲಿ ಶಾಸಕನಾದಾಗ ಜಿಲ್ಲೆಯಲ್ಲಿಯೇ ಇಲ್ಲದಂತ ಐ.ಟಿ.ಐ.ಕಾಲೇಜು ಕಟ್ಟಿಸಿದ್ದೇನೆ. ಭಾರತ ಸರ್ಕಾರ ನೂರಾರು ಕೋಟಿ ರೂ. ಗಳ ಪರಿಕರಗಳನ್ನು ನೀಡಿದೆ. ಜೀವನದ ಮೌಲ್ಯ ಅರ್ಥಮಾಡಿಕೊಂಡು ಗುರು–ಹಿರಿಯರು, ಪೋಷಕರು ಹಾಗು ಕಾಲೇಜಿಗೆ ಕೀರ್ತಿ ತರಬೇಕು. ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು 26 ಅಮಾಯಕರನ್ನು ಬಲಿ ತೆಗೆದುಕೊಂಡಿದ್ದಕ್ಕೆ ಪ್ರತಿಕಾರವಾಗಿ ನಮ್ಮದೇಶದಯೋಧರುಉಗ್ರರನೆಲೆಗಳನ್ನು ಧ್ವಂಸಗೊಳಿಸಿದ್ದಾರೆ. ಜಗತ್ತೆ ನಿಬ್ಬೆರಗಾಗುವ ರೀತಿಯಲ್ಲಿ ಯುದ್ದ ಸಾಮಾಗ್ರಿಗಳನ್ನು ತಯಾರು ಮಾಡುವ ಶಕ್ತಿ ಭಾರತಕ್ಕಿದೆ. ದೇಶದ ಪ್ರಧಾನಿ ನರೇಂದ್ರಮೋದಿರವರು ವಿಶ್ವವೇ ಭಾರತದತ್ತ ತಿರುಗಿ ನೋಡುವಂತೆ ಮಾಡಿದ್ದಾರೆ. ಚಳ್ಳಕೆರೆಯ ದೊಡ್ಡುಳ್ಳಾರ್ತಿ ಸಮೀಪವಿರುವ ಡಿ.ಆರ್.ಡಿ.ಓ.ದಲ್ಲಿ ಮುಂದಿನ ದಿನಗಳಲ್ಲಿ ಬ್ರಮ್ಹೋಸ್ ಕ್ಷಿಪಣಿ ತಯಾರು ಮಾಡಲಾಗುವುದು. ಪ್ರತಿ ವರ್ಷವೂ ಡಿ.ಆರ್.ಡಿ.ಓ.ದಲ್ಲಿ ನಾಲ್ಕು ಕೋಟಿ ರೂ.ಗಳನ್ನು ಖರ್ಚು ಮಾಡಲಾಗುತ್ತಿದೆ. ಇನ್ನು ಮೂರು ತಿಂಗಳೊಳಗೆ ಗ್ರಂಥಾಲಯ ಕಟ್ಟಡ ಪೂರ್ಣಗೊಳಿಸಲಾಗುವುದೆಂದರು.

ಕವಿ ಚಂದ್ರಶೇಖರತಾಳ್ಯ ಮಾತನಾಡಿ ಗ್ರಂಥಾಲಯ ದೇವಸ್ಥಾನದಷ್ಟೆ ಪವಿತ್ರವಾದುದು. ಗುಡಿಗೆ ಹೋದರೆ ದೇವರು ಮಾತನಾಡುವುದಿಲ್ಲ. ಅದೇ ಗ್ರಂಥಾಲಯಕ್ಕೆ ಹೋದಾಗ ಪುಸ್ತಕಗಳು ನಮ್ಮೊಂದಿಗೆ ಮಾತನಾಡುತ್ತವೆ. ಬುದ್ದಿ, ಜ್ಞಾನಶಕ್ತಿಯನ್ನುವಿಸ್ತರಿಸುತ್ತವೆ.ಲೋಕಜ್ಞಾನ ಕೊಡುವುದರ ಜೊತೆಗೆ ನೈತಿಕ ಶಕ್ತಿಯನ್ನು ಹೆಚ್ಚಿಸುತ್ತದೆಂದು ಹೇಳಿದರು.

ಸಂವಿಧಾನ ನಮ್ಮ ದೇಶಕ್ಕೆ ಆಧಾರವಾದರೆ ಗ್ರಂಥಗಳು ಅದರ ಕಟ್ಟವಿದ್ದಂತೆ. ಇಂದಿನ ದಿನಗಳಲ್ಲಿ ಓದುವ ಸಂಸ್ಕೃತಿ ಕ್ಷೀಣಿಸುತ್ತಿದೆ. ಡಿಜಿಟಲ್ ಯುಗದಲ್ಲಿ ಪುಸ್ತಕಗಳು ಯಥೇಚ್ಚವಾಗಿ ಪ್ರಕಟಗೊಳ್ಳುತ್ತಿದ್ದು, ಓದುಗರ ಸಂಖ್ಯೆ ದಿನೆ ದಿನೆ ಕಡಿಮೆಯಾಗುತ್ತಿದೆ. ಯುವ ಜನಾಂಗ ಓದಿನ ಕಡೆಗೆ ಹೆಚ್ಚಿನ ಗಮನ ಕೊಟ್ಟು ಜೀವನದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ಸ್ವತಂತ್ರ ಭಾರತದ ಪ್ರಥಮ ಶಿಕ್ಷಣ ಮಂತ್ರಿಯಾಗಿದ್ದ ಅಬ್ದುಲ್ ಕಲಾಮ್ ಆಜಾದ್ ಗ್ರಂಥಗಳ ಓದಿನ ಮಹತ್ವ ಅರಿತು ಭಾರತದ ಎಲ್ಲಾ ಅಂಗೀಕೃತ ಭಾಷೆಗಳ ಗ್ರಂಥಗಳನ್ನೊಳಗೊಂಡ ರಾಷ್ಟ್ರೀಯ ಗ್ರಂಥಾಲಯ ಸ್ಥಾಪಿಸಿದರು.

ಪುರಸಭೆ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್, ಕಾಲೇಜು ಅಭಿವೃದ್ದಿ ಸಮಿತಿ ಸದಸ್ಯರುಗಳಾದ ಮುರುಗೇಶ್, ಡಿ.ಸಿ.ಮೋಹನ್, ಮಲ್ಲಿಕಾರ್ಜುನಸ್ವಾಮಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಶಿವಮೂರ್ತಿನಾಯ್ಕ, ಶರಣಪ್ಪ, ಪ್ರವೀಣ್‌ಕುಮಾರ್, ಸುರೇಶ್, ಮಂಜುನಾಥ, ಕಾಲೇಜಿನ ಬೋಧಕ–ಬೋಧಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T